# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 71 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 30–09–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 71 | RNI No: KARKAN/2023/88462 | Chitradurga | Date: 30-09-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ರಾಜಕೀಯವಾಗಿ ತೊಂದರೆ ಕೊಡಬಹುದು: ಆದರೆ ನನ್ನನ್ನು ಅಲ್ಲಾಡಿಸಲು ಸಾಧ್ಯವಿಲ್ಲ 2

ಏನಿದು ಮಹಿಷ ದಸರಾ ಗಲಾಟೆ? ರಾಕ್ಷಸನಿಗೇಕೆ ದಸರೆಯ ಸಂಭ್ರಮ? 3

ಲಕ್ನೋ ತಂಡಕ್ಕೆ ನಾಯಕ ಕೆಎಲ್ ರಾಹುಲ್ ಗುಡ್ ಬೈ? 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ರಾಜ್ಯದಲ್ಲಿ ಅ.7ರಿಂದ ಇ-ಆಸ್ತಿ ಖಾತಾ ತಂತ್ರಾಂಶ ವ್ಯವಸ್ಥೆ ಜಾರಿ: ರಾಜ್ಯ ಸರ್ಕಾರದಿಂದ ಆದೇಶ

» ಬೆಂಗಳೂರು

ನಗರಾಭಿವೃದ್ಧಿ ಇಲಾಖೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿಗಳ ಹಕ್ಕು ವರ್ಗಾವಣೆಗೆ ಸಂಬಂಧಿಸಿದಂತೆ ಇ–ಆಸ್ತಿ ತಂತ್ರಾಂಶ ಮತ್ತು ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲು ಸಮ್ಮತಿ ನೀಡಿದ್ದು, ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಸ್ಥಿರಾಸ್ತಿಗಳ ನೋಂದಣಿಯನ್ನು ಇ–ಆಸ್ತಿ ತಂತ್ರಾಂಶದಿಂದ ಕಡ್ಡಾಯವಾಗಿ ಮಾಹಿತಿ ಪಡೆದು ನೋಂದಾಯಿಸಲು ಇ–ಆಸ್ತಿ ತಂತ್ರಾಂಶವನ್ನು ಕಾವೇರಿ–2 ತಂತ್ರಾಂಶದೊಂದಿಗೆ ದಿ:23/09/2024ರ ಸರ್ಕಾರದ ಆದೇಶದಂತೆ ಜಾರಿಯಾಗಿರುತ್ತದೆ. 2024ರ ಅಕ್ಟೋಬರ್ 07 ರಿಂದ ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯ ಎಲ್ಲಾ ಉಪನೋಂದಣಿ ಕಚೇರಿಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ತಂತ್ರಾಂಶದಿಂದಲೇ ಇ–ಖಾತಾ ಪಡೆಯಬೇಕೆಂದು ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ನಗರ ಪ್ರದೇಶಗಳಲ್ಲಿ ಕೃಷಿಯೇತರ ಆಸ್ತಿಗಳಿಗೆ ಸಂಬಂಧಿಸಿದಂತೆ ಇ–ಆಸ್ತಿ ತಂತ್ರಾಂಶವನ್ನು ರೂಪಿಸಿದ್ದು, ಇ–ಆಸ್ತಿ ತಂತ್ರಾಂಶವನ್ನು ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ–2.0 ತಂತ್ರಾಂಶದೊಂದಿಗೆ ಪ್ರಾಯೋಗಿಕವಾಗಿ ರಾಮನಗರ ಮತ್ತು ಕನಕಪುರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಸ್ವತ್ತುಗಳಿಗೆ ಸಂಬಂಧಿಸಿದಂತೆ, 2020 ರಿಂದ ನೋಂದಣಿ ಮಾಡುತ್ತಿರುವುದು ಯಶಸ್ವಿಯಾಗಿರುತ್ತದೆ. ಇ–ಖಾತಾ ಸಂಯೋಜನೆಯಿಂದ ಸಾರ್ವಜನಿಕರು ಸ್ವತ್ತುಗಳ ನೋಂದಣಿ ವೇಳೆ ಮೋಸ ಹೋಗುವುದನ್ನು ತಡೆಯಬಹುದು. ಸ್ವತ್ತಿನ ಸ್ವರೂಪ ಮತ್ತು ನೈಜ ಮಾಲೀಕರನ್ನು ಗುರುತಿಸಲು ಸಾಧ್ಯ. ನೈಜ ಮಾಲೀಕರಿಗೆ ವಂಚಿಸಿ ಬೇರೆಯವರಿಂದ ಸ್ವತ್ತುಗಳ ನೋಂದಣಿಯನ್ನು ತಪ್ಪಿಸಬಹುದು. ಸ್ವತ್ತುಗಳ ಖರೀದಿದಾರರಿಗೆ ಸ್ವತ್ತಿನ ನೈಜ ಮಾಲೀಕರನ್ನು ಗುರುತಿಸಲು ಸುಲಭ ಸಾಧ್ಯ. ಭವಿಷ್ಯದಲ್ಲಿ ಉಂಟಾಗಬಹುದಾದ ವ್ಯಾಜ್ಯ ಕಾನೂನು ತೊಂದರೆಗಳನ್ನು ತಪ್ಪಿಸಬಹುದಾಗಿದೆ. ಆದ್ದರಿಂದ ಸಾರ್ವಜನಿಕರು ಇ–ಆಸ್ತಿ ಸಂಯೋಜನೆಯ ಸದುಪಯೋಗಪಡೆದುಕೊಳ್ಳುವುದು.

### ವಿದ್ಯುತ್ ಬಿಲ್ ಪಾವತಿಸದಿದ್ದರೆ ಕರೆಂಟ್ ಕಟ್: ಅಕ್ಟೋಬರ್ 1ರಿಂದಲೇ ನಿಯಮ ಜಾರಿ!

» ಬೆಂಗಳೂರು

ನಿಗದಿತ ಸಮಯದಲ್ಲಿ ಬಿಲ್ ಪಾವತಿಸದಿದ್ದರೆ ಅಕ್ಟೋಬರ್ 1ರಿಂದ ಗ್ರಾಹಕರ ವಿದ್ಯುತ್ ಸಂಪರ್ಕ ಕಡಿತಗೊಳಿಸುವುದಾಗಿ ಹೆಸ್ಕಾಂ ತಿಳಿಸಿದ್ದು, ವಿದ್ಯುತ್ ಬಿಲ್ ನೀಡಿದ ನಂತರದ 30 ದಿನಗಳೊಳಗೆ ಬಿಲ್ ಪಾವತಿಸದಿದ್ದಲ್ಲಿ ನಿಯಮಾವಳಿಗಳ ಅನ್ವಯ ಗ್ರಾಹಕರ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುತ್ತದೆ.

ಅಕ್ಟೋಬರ್ 1ರಿಂದಲೇ ಈ ನಿಯಮ ಕಟ್ಟುನಿಟ್ಟಾಗಿ ಜಾರಿಯಾಗಲಿದೆ ಎಂದು ಹೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ. ಗೃಹ ಮತ್ತು ವಾಣಿಜ್ಯ ಬಳಕೆದಾರರು, ಅಪಾರ್ಟ್‌ಮೆಂಟ್‌ಗಳು ಹಾಗೂ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆದ ಗ್ರಾಹಕರು ನಿಗದಿತ 30 ದಿನದೊಳಗೆ ಬಿಲ್ ಪಾವತಿಸಬೇಕು ಇಲ್ಲದಿದ್ದಲ್ಲಿ ಮೀಟರ್ ರೀಡಿಂಗ್‌ಗೆ ಬರುವ ದಿನ ಅಂದರೆ, ಪ್ರತಿ ತಿಂಗಳ ಮೊದಲ 15 ದಿನದಲ್ಲೇ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು ಹಾಗಾಗಿ, ಗ್ರಾಹಕರು ಸಕಾಲದಲ್ಲಿ ಶುಲ್ಕ ಪಾವತಿಸುವಂತೆ ಹೆಸ್ಕಾಂ ಪ್ರಕಟಣೆಯಲ್ಲಿ ಕೋರಿದೆ.

### ಜಾತಿಗಣತಿ ವರದಿ ಜಾರಿ ಮಾಡೇ ಮಾಡುತ್ತೇನೆ: ಸಿದ್ದರಾಮಯ್ಯ ಘೋಷಣೆ

» ಬೆಂಗಳೂರು

ಜಾತಿ ಗಣತಿ ವರದಿ ಎಂದೇ ಜನಪ್ರಿಯವಾಗಿರುವ ಸಾಮಾಜಿಕ ಆರ್ಥಿಕ ಮತ್ತು ಶಿಕ್ಷಣ ಸಮೀಕ್ಷೆಯ ಬಹು ನಿರೀಕ್ಷಿತ ವರದಿಯನ್ನು ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಸಲ್ಲಿಸಲಾಗಿದ್ದು, ಇದೀಗ ಅದನ್ನು ಜಾರಿಗೆ ತರುವುದಾಗಿ ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ಮುಡಾ ಹಗರಣದ ತನಿಖೆ ಸಂಕಷ್ಟ ಮಧ್ಯ ಸಿದ್ದರಾಮಯ್ಯನವರು ಜಾತಿ ಗಣತಿ ವರದಿ ಜಾರಿ ಮಾಡೇ ಮಾಡುತ್ತೇನೆ ಎಂದು ಘೋಷಣೆ ಮಾಡಿದ್ದಾರೆ.

# ಹೋಬಳಿಗೊಂದು ವಸತಿ ಶಾಲೆ ಗುರಿ

## ಸಚಿವ ಸಂಪುಟದ ಮುಂದಿರಿಸಿ ಸಾಮಾಜಿಕ ಗಣತಿ (ಜಾತಿ ಗಣತಿ) ವರದಿ ಜಾರಿಗೆ ಕ್ರಮ: ಮುಖ್ಯಮಂತ್ರಿ ಸಿದ್ದರಾಮಯ್ಯ

» ಮೈಸೂರು

ಇನ್ನೂ ಸೌಲಭ್ಯಗಳಿಂದ ವಂಚಿತರಾಗಿರುವ ಜನರನ್ನು ಗುರುತಿಸುವ ಉದ್ದೇಶದಿಂದಲೇ ನಮ್ಮ ಸರ್ಕಾರ ಸಾಮಾಜಿಕ ಗಣತಿಯನ್ನು ನಡೆಸಿದ್ದು, ಮುಂದಿನ ದಿನಗಳಲ್ಲಿ ಈ ವರದಿಯನ್ನು ಸಚಿವ ಸಂಪುಟದ ಮುಂದಿರಿಸಿ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದರು.

ಭಾನುವಾರ ಮೈಸೂರಿನಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಹಳೆ ವಿದ್ಯಾರ್ಥಿಗಳ ಸಂಘದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಾಮಾಜಿಕ ಗಣತಿ ವರದಿಯನ್ನು ಸರ್ಕಾರ ಸ್ವೀಕರಿಸಿದ್ದು, ಆದರೆ ಹಲವು ಕಾರಣದಿಂದ ಆ ವರದಿ ಇನ್ನೂ ಜಾರಿಯಾಗಿಲ್ಲ. ಆದರೆ ಮುಂದಿನ ದಿನಗಳಲ್ಲಿ ಈ ವರದಿಯನ್ನು ಸಚಿವ ಸಂಪುಟದ ಮುಂದಿರಿಸಿ ಜಾರಿಗೆ ಕ್ರಮಕೈಗೊಳ್ಳಲಾಗುವುದು. ಜಾತಿ ಜನಗಣತಿ ಕಾಂಗ್ರೆಸ್ ಪಕ್ಷದ ಸಿದ್ದಾಂತವೂ ಆಗಿದೆ. ದೇಶದಲ್ಲಿ ಜನಸಂಖ್ಯೆಯ ಗಣತಿಯೊಂದಿಗೆ ಜಾತಿ ಗಣತಿ ಕಾರ್ಯ 1930ರ ನಂತರ ಆಗಿಲ್ಲ. ಈಗ ಎಲ್ಲಾ ರಾಜ್ಯಗಳಲ್ಲಿ ಜಾತಿ ಗಣತಿ ಕುರಿತು ಚರ್ಚೆ ನಡೆಯುತ್ತಿದೆ ಎಂದು ವಿವರಿಸಿದರು. ಹಿಂದುಳಿದವರಿಗೆ, ದಲಿತ– ಅಲ್ಪಸಂಖ್ಯಾತರಿಗೆ ಸಮಾನ ಅವಕಾಶ ದೊರೆಯಬೇಕೆಂಬುದು ಸಂವಿಧಾನ ರಚಿಸಿದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಉದೇಶವಾಗಿತ್ತು. ಅವಕಾಶಗಳಿಂದ ವಂಚಿತರಾಗಿರುವುದರಿಂದಲೇ ಈ ಅಸಮಾನತೆ ಸೃಷ್ಟಿಯಾಗಿದ್ದು, ಎಲ್ಲರಿಗೂ ಸಮಾನ ಅವಕಾಶವನ್ನು ಸಂವಿಧಾನದ ಮೂಲಕ ಕಲ್ಪಿಸಲು ಅವರು ಪ್ರಯತ್ನಿಸಿದರು. ಸಾಮಾಜಿಕ ಜವಾಬ್ದಾರಿಯನ್ನು ಈ ತಲೆಮಾರಿನಲ್ಲಿ ಮೂಡಿಸುವ ಉದ್ದೇಶದಿಂದ ಸಂವಿಧಾನ ಪೀಠಿಕೆ ಬಗ್ಗೆ ಅರಿವು ಮೂಡಿಸುವ ಕಾರ್ಯವನ್ನು ರಾಜ್ಯದಾದ್ಯಂತ ನಾವು ಮಾಡಿದ್ದೇವೆ ಎಂದರು.

ವೈಜ್ಞಾನಿಕ ಮನೋಭಾವವನ್ನು ಬೆಳೆಸಿ ಉತ್ತಮ ಮಾನವರಾಗಿ ರೂಪಿಸುವಂತಹ ಶಿಕ್ಷಣವೇ ಗುಣಮಟ್ಟದ ಶಿಕ್ಷಣವಾಗಿದೆ. ಜಾತಿ ವ್ಯವಸ್ಥೆ, ಕಂದಾಚಾರ, ಮೌಢ್ಯಗಳಿಂದ ಮುಕ್ತರಾಗಿ ಕುವೆಂಪು ಹೇಳಿದ ಹಾಗೆ ವಿಶ್ವ ಮಾನವರಾಗಬೇಕಿದೆ. ವೈಜ್ಞಾನಿಕತೆ, ವೈಚಾರಿಕತೆ, ಸಮಾಜಮುಖಿಯಾದ ಜವಾಬ್ದಾರಿ ಬೆಳೆಯದೆ ಹೋದರೆ ವಿದ್ಯೆ ದೊರೆತು ಏನು ಪ್ರಯೋಜನ. ಪ್ರತಿಯೊಬ್ಬರೂ ಸಮಾಜ ಮುಖಿಯಾಗಿ ಸಮಾಜಕ್ಕೆ ನಮ್ಮ ಕೊಡುಗೆ ಏನು ಎಂದು ಯೋಚಿಸಬೇಕಿದೆ ಎಂದು ಹೇಳಿದರು.



ವಸತಿ ನಿಲಯಗಳಲ್ಲಿ ಕಲಿತವರು ಇಂದು ಅನೇಕ ಮಂದಿ ಉನ್ನತ ಸ್ಥಾನಗಳಲ್ಲಿದ್ದಾರೆ. ಈ ರೀತಿ ಉನ್ನತ ಹುದ್ದೆಗಳಲ್ಲಿರುವವರು ಸಮಾಜಕ್ಕೆ ಹಿಂತಿರುಗಿ ನೀಡಬೇಕಾಗಿದೆ. ನೀವು ಯಾವ ಕ್ಷೇತ್ರದಲ್ಲಿದ್ದೀರಿ ಅಲ್ಲಿ ಸಮಾಜದ ದೀನ ದಲಿತರಿಗಾಗಿ ನಿಮ್ಮ ಕೈಯಿಂದಾಗುವಷ್ಟು ಸಹಾಯ ಮಾಡಿ. ಇದುವೇ ನೀವು ಸಮಾಜಕ್ಕೆ ನೀಡುವ ಕೊಡುಗೆ. ಸಮಾಜದ ಋಣ ತೀರಿಸಿದರೆ ನಮ್ಮ ಜೀವನ ಸಾರ್ಥಕ. ಸಮಾಜದ ಬಗ್ಗೆ ಚಿಂತಿಸದೆ, ಕುಟುಂಬದ ಬಗ್ಗೆ ಮಾತ್ರ ಯೋಚಿಸುವವರು ಸ್ವಾರ್ಥಿಗಳಾಗುತ್ತಾರೆ. ಇಂತವರಿಂದಲೇ ಸಮಾಜದಲ್ಲಿ ವೃದ್ಧಾಶ್ರಮಗಳ ಸಂಖ್ಯೆಯೂ ಹೆಚ್ಚಾಗುತ್ತಿದೆ. ವ್ಯವಸ್ಥೆಯಲ್ಲಿ ಬದಲಾವಣೆ ತರಲು ಪ್ರತಿಯೊಬ್ಬರೂ ಪ್ರಯತ್ನಿಸಬೇಕು ಎಂದರು. ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಈಗಲೂ ಸಮಾಜದಲ್ಲಿ ಜಾತಿ ಶ್ರೇಣಿಯನ್ನು ಮುಂದುವರೆಸಲು ಪ್ರಯತ್ನಿಸುತ್ತಿದ್ದಾರೆ. ಅವರು ಈ ಸಮಾಜದಲ್ಲಿ ದಲಿತರು, ಹಿಂದುಳಿದವರು ಮತ್ತು ಅಲ್ಪಸಂಖ್ಯಾತರು ಮುಂದೆ ಬರುವುದನ್ನು ಇಷ್ಟ ಪಡುವುದಿಲ್ಲ, ಈ ಹಿನ್ನೆಲೆಯಲ್ಲಿ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಬಡವರಿಗೆ ಆರ್ಥಿಕವಾಗಿ ಸಾಮಾಜಿಕವಾಗಿ ಶಕ್ತಿ ನೀಡಲು ಭಾಗ್ಯ ಯೋಜನೆಗಳನ್ನು ಜಾರಿಗೊಳಿಸಿದ್ದೆ. ಈಗ ಐದು ಗ್ಯಾರಂಟಿ ಯೋಜನೆಗಳ ಮೂಲಕ ಸಮಾಜದ ಎಲ್ಲಾ ಜಾತಿಯ ದುರ್ಬಲ ವರ್ಗಕ್ಕೆ ಆರ್ಥಿಕವಾಗಿ ಶಕ್ತಿ ತುಂಬುವ ಕಾರ್ಯವನ್ನು ಮಾಡಲಾಗಿದೆ ಎಂದರು.

**ಸರಿಸಮಾನರಾಗಿ ಬದುಕುವ ಮೂಲಕ ಸಮಸಮಾಜ ನಿರ್ಮಾಣ:** ಹಿಂದುಳಿದ ವರ್ಗ , ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಶಿಕ್ಷಣ ಕಡ್ಡಾಯವಾಗಿ ದೊರೆಯಬೇಕು. ಈ ನಿಟ್ಟನಲ್ಲಿ ವಿದ್ಯಾರ್ಥಿ ನಿಲಯಗಳು ಅತ್ಯಾವಶ್ಯಕ. ಜಾತಿ ವ್ಯವಸ್ಥೆ ಆರ್ಥಿಕ, ಸಾಮಾಜಿಕ ಅಸಮಾನತೆಗೆ ಕಾರಣವಾಗಿದ್ದು, ದುರ್ಬಲ ವರ್ಗದ ಜನರು ಅವಕಾಶದಿಂದಲೂ ವಂಚಿತರಾಗುತ್ತಿದ್ದಾರೆ. ಸಮಾನ ಅವಕಾಶಗಳು ದೊರೆಯುವ ಮೂಲಕ ತುಳಿಕ್ಕೊಳಗಾದವರು ಜೀವನದಲ್ಲಿ ಅಭಿವೃದ್ಧಿ ಹೊಂದುವಂತಾಗಬೇಕು. ಯಾವುದೇ ಜಾತಿ ಧರ್ಮಗಳು ಕರ್ಮಸಿದ್ಧಾಂತವನ್ನು ಪ್ರತಿಪಾದಿಸುವುದಿಲ್ಲ. ಇತಿಹಾಸ ತಿಳಿದವರು ಮಾತ್ರ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂಬುದನ್ನು ಡಾ.ಬಿ.ಆರ್.ಅಂಬೇಡ್ಕರ್ ರವರು ತಿಳಿಸಿದ್ದಾರೆ. ಎಲ್ಲರೂ ಸರಿಸಮಾನರಾಗಿ ಬಾಳಿದಾಗ ಮಾತ್ರ ಸಮಸಮಾಜ ನಿರ್ಮಾಣ ಸಾಧ್ಯ ಎಂದು ಬುದ್ಧ ಬಸವಾದಿ ಶರಣರು ಹಾಗೂ ಅಂಬೇಡ್ಕರ್, ಗಾಂಧೀಜೀ ಅವರ ಪ್ರತಿಪಾದನೆಯಾಗಿತ್ತು ಎಂದರು.

**1977 ವಿದ್ಯಾರ್ಥಿ ನಿಲಯಗಳು ಪ್ರಾರಂಭ:** ನಮ್ಮ ಸಂವಿಧಾನ ಜಾರಿಯಾಗುವ ಮೊದಲೇ ಮೈಸೂರು ರಾಜ್ಯದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಡಳಿತದಲ್ಲಿ ಮೀಸಲಾತಿಯನ್ನು ಜಾರಿಗೆ ತರಲಾಗಿತ್ತು. 1960 ರಲ್ಲಿ ನಾಗೇಗೌಡ ಸಮಿತಿ ರಚನೆಯಾಯಿತು. ದೇವರಾಜ ಅರಸು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಹಾವನೂರು ಆಯೋಗ ರಚಿಸಲಾಯಿತು. ವರದಿಗೆ ವಿರೋಧದ ನಡುವೆಯೂ ಜಾರಿಗೆ ತರಲಾಯಿತು. 1977 ರಲ್ಲಿ ಹಿಂದುಳಿದ ವರ್ಗ ಮಕ್ಕಳಿಗೆ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲಾಯಿತು. ವಿದ್ಯಾರ್ಥಿನಿಲಯಗಳಲ್ಲಿ ಶೇ.75 ರಷ್ಟು ಹಿಂದುಳಿದ ಜಾತಿಗಳ ಮಕ್ಕಳಿದ್ದರೆ, ಶೇ.25 ರಷ್ಟು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮಕ್ಕಳಿದ್ದಾರೆ. 1,87,000 ವಿದ್ಯಾರ್ಥಿಗಳು ಇಂದು ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ ಎಂದರು.

**ವಿದ್ಯಾರ್ಥಿದೆಸೆಯಲ್ಲಿನ ಸಂಕಷ್ಟಗಳನ್ನು ಸ್ಮರಿಸಿಕೊಂಡು ಸಿಎಂ:** ನಾನು ಓದುವಾಗ ಮೀಸಲಾತಿ ವ್ಯವಸ್ಥೆ ಇಲ್ಲದಿದ್ದ ಕಾರಣ, ಉನ್ನತ ಶಿಕ್ಷಣಕ್ಕೆ ಅವಕಾಶ ದೊರಕಲಿಲ್ಲ. ಪಿಯುಸಿ, ಪದವಿ ಮಾಡುವ ಸಂದರ್ಭದಲ್ಲಿ ವಸತಿ ವ್ಯವಸ್ಥೆ ಇಲ್ಲದೇ, ನಾನೇ ಒಂದು ರೂಂ ಮಾಡಿಕೊಂಡು ಓದುತ್ತಿದ್ದೆ. ಆದ್ದರಿಂದ ವಿದ್ಯಾರ್ಥಿಗಳ ಕಷ್ಟಗಳ ಬಗ್ಗೆ ಅರಿತಿದ್ದ ನಾನು ವಿದ್ಯಾಸಿರಿ ಯೋಜನೆಯನ್ನು ಜಾರಿಗೆ ತಂದಿರುವುದಾಗಿ ತಿಳಿಸಿದ ಮುಖ್ಯಮಂತ್ರಿಗಳು, ಕಾನೂನು ಪದವಿ ಓದಲು ತಾನು ಮಾಡಿದ ಸಂಘರ್ಷಗಳನ್ನೂ ವಿವರಿಸಿದರು.

**ವಿದ್ಯಾರ್ಥೀ ವೇತನ ಹೆಚ್ಚಳ:** ವಿದ್ಯಾರ್ಥಿ ನಿಲಯಗಳಲ್ಲಿ ಪೌಷ್ಟಿಕ ಆಹಾರ ದೊರಕಿಸುವ ಉದ್ದೇಶದಿಂದ ಪ್ರೀಮೆಟ್ರಿಕ್ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನವನ್ನು ಹೆಚ್ಚಳ ಮಾಡಿದೆ. ಹೀಗೆ ಐದು ವರ್ಷವೂ ಕೂಡ ವಿದ್ಯಾರ್ಥಿ ವೇತನವನ್ನು ಹಂತ ಹಂತವಾಗಿ ಹೆಚ್ಚಿಸಲಾಗಿ, ಮುಂಚೆ ಇದ್ದ 750 ರೂ ವಿದ್ಯಾರ್ಥಿ ವೇತನವನ್ನು 1750 ರೂ.ಗಳಿಗೆ ಹೆಚ್ಚಿಸಲಾಗಿದೆ. ಹಾಸ್ಟೆಲ್ ಗಳಲ್ಲಿ ಇರುವ ವಿದ್ಯಾರ್ಥಿಗಳಿಗೆ ಪೌಷ್ಟಿಕ ಆಹಾರ ಲಭಿಸಿದಾಗ ಮಾತ್ರ ಉತ್ತಮ ಜ್ಞಾನಾರ್ಜನೆ ಮಾಡಲು ಸಾಧ್ಯ. 2024–25 ರಲ್ಲಿಯೂ ಕೂಡ ವಿದ್ಯಾರ್ಥಿ ವೇತನವನ್ನು 1850 ರೂ.ಗಳಿಗೆ ಪುನ: ಹೆಚ್ಚಿಸಲಾಗಿದೆ ಎಂದು ವಿವರಿಸಿದರು.

**ಪ್ರತಿ ಹೋಬಳಿಗೊಂದು ವಸತಿ ಶಾಲೆ ಗುರಿ ಸಾಧಿಸಲು ಬದ್ಧ:** ನಾನು ಹಣಕಾಸು ಮಂತ್ರಿಯಾಗಿದ್ದಾಗ, ದಲಿತ ಸಂಘರ್ಷ ಸಮಿತಿಯವರು ಸಾರಾಯಿ ಅಂಗಡಿ ಬೇಡ, ಮಕ್ಕಳಿಗೆ ವಸತಿ ಶಾಲೆ ನಿರ್ಮಾಣವಾಗಬೇಕೆಂಬ ಬೇಡಿಕೆಯನ್ನಾಧರಿಸಿ, 1994–95 ರಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಪ್ರಾರಂಭಿಸಲಾಯಿತು. ಹೋಬಳಿಗೊಂದು ವಸತಿ ಶಾಲೆ ಯೋಜನೆಯಂತೆ ರಾಜ್ಯದಲ್ಲಿ ಒಟ್ಟು 822 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ನಿರ್ಮಿಸಲಾಗಿದೆ. ಈ ವರ್ಷ 20 ವಸತಿ ಶಾಲೆ ನಿರ್ಮಿಸಲು ತೀರ್ಮಾನಿಸಲಾಗಿದೆ. ಹಳ್ಳಿಗಾಡಿನ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕೆಂಬ ಉದ್ದೇಶದಿಂದ ಮುಂದಿನ ವರ್ಷದೊಳಗೆ ಉಳಿದೆಲ್ಲ ಹೋಬಳಿಗಳಲ್ಲೂ ರಾಜ್ಯದ ಪ್ರತಿ ಹೋಬಳಿಯಲ್ಲಿ ಒಂದು ವಸತಿ ಶಾಲೆ ನಿರ್ಮಿಸುವ ಗುರಿಯನ್ನು ಸಾಧಿಸಬೇಕು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಆದ್ದರಿಂದ ಹತ್ತನೆ ತರಗತಿಯಲ್ಲಿ ಓದುವ ಮಕ್ಕಳಿಗೆ ವಾರಕ್ಕೆ ಆರು ದಿನ ಮೊಟ್ಟೆ ನೀಡಲಾಗುತ್ತಿದೆ. ಅನ್ನಭಾಗ್ಯದಡಿ 5 ಕೆಜಿ ಅಕ್ಕಿ, ಕ್ಷೀರಭಾಗ್ಯ ಕಾರ್ಯಕ್ರಮ, ಬಡಮಕ್ಕಳಿಗೆ ಶೂ ಭಾಗ್ಯ ಸೇರಿದಂತೆ ಹಲವು ಜನಪರ ಯೋಜನೆ ಜಾರಿಗೆ ತರಲಾಗಿದೆ ಎಂದರು.

### ಮುಡಾ ಪ್ರಕರಣದ ತನಿಖೆಯಲ್ಲಿ ಹಸ್ತಕ್ಷೇಪ ಇಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ

» ಮೈಸೂರು

ಮುಡಾ ಪ್ರಕರಣದ ತನಿಖೆ ಪ್ರಸ್ತುತ ಲೋಕಾಯುಕ್ತದಲ್ಲಿದ್ದು, ನಾನು ಅದರಲ್ಲಿ ಯಾವುದೇ ರೀತಿಯ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ಅವರು ಇಂದು ಮೈಸೂರಿನ ತಮ್ಮ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.ಮುಡಾ ಪ್ರಕರಣ ಸಂಬಂಧ ಸಿಎಂ ವಿರುದ್ಧ ಇಡಿಯಲ್ಲಿ ದೂರು ದಾಖಲಾಗಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಇಡಿಯಲ್ಲಿ ದೂರು ದಾಖಲಾಗಿದ್ದರೆ, ಕಾನೂನು ರೀತಿ ಕ್ರಮ ಜರುಗಿಸಲಾಗುತ್ತದೆ ಎಂದರು.

**ಅಧಿಕಾರಿಗಳ ವಿರುದ್ಧ ಟೀಕೆ ಸರಿಯಲ್ಲ:** ಕುಮಾರಸ್ವಾಮಿಯವರು ಲೋಕಾಯುಕ್ತ ಎಡಿಜಿಪಿ ಮೇಲೆಯೂ ಟೀಕೆ ಮಾಡುತ್ತಿರುವ ಬಗ್ಗೆ ಬಗ್ಗೆ ಪ್ರತಿಕ್ರಿಯೆ ನೀಡಿ, ಕುಮಾರಸ್ವಾಮಿಯವರು ತಪ್ಪೆಸಗಿಸಿದ್ದು, ಅಧಿಕಾರಗಳ ವಿರುದ್ಧ ಟೀಕೆ ಮಾಡುವುದು ಸರಿಯಲ್ಲ. ಇಂತಹ ಹೇಳಿಕೆಗಳ ಮೇಲೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ

**ರೇವ್ ಪಾರ್ಟಿ ವಿರುದ್ಧ ಪೋಲೀಸರ ಕ್ರಮ:** ಮೈಸೂರಿನಲ್ಲಿ ರೇವ್ ಪಾರ್ಟಿ ನಡೆದಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ರೇವ್ ಪಾರ್ಟಿ ನಡೆದಿರುವ ಬಗ್ಗೆ ಮಾಹಿತಿ ಬಂದಿದ್ದು,ಈ ಬಗ್ಗೆ ಪೊಲೀಸರು ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ ಎಂದರು.

**ಅಕ್ಟೋಬರ್ 2 ರಂದು ದಸರಾ ಸಿದ್ಧತೆ ಗಳ ವೀಕ್ಷಣೆ:** ದಸರಾ ಉತ್ಸವದ ಸಿದ್ಧತೆಗಳ ಪರ್ತಕರ್ತರಿಗೆ ಮಾಹಿತಿ ನೀಡುತ್ತಾ, ದಸರಾ ಉತ್ಸವಗಳ ಸಿದ್ದತೆಗಳಿಗೆ ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದ್ದು, ಸಿದ್ಧತೆಗಳನ್ನು ವೀಕ್ಷಿಸಲು ಅಕ್ಟೋಬರ್ 2 ರಂದು ಮೈಸೂರಿಗೆ ಆಗಮಿಸಲಿದ್ದೇನೆ ಎಂದರು.

## ಪ್ರಮುಖ ಸುದ್ದಿ

# ಕಾಂಗ್ರೆಸ್ ಸರ್ಕಾರ ಉರುಳಿಸಲು ನಮ್ಮವರೇ 1000 ಕೋಟಿ ಮೀಸಲಿಟ್ಟಿದ್ದಾರೆ: ಶಾಸಕ ಯತ್ನಾಳ್ ಬಾಂಬ್

» ದಾವಣಗೆರೆ

ಕಾಂಗ್ರೆಸ್ ಸರ್ಕಾರ ಉರುಳಿಸಲು ನಮ್ಮವರೇ 1 ಸಾವಿರ ಕೋಟಿ ಹಣವನ್ನು ಮೀಸಲಿಟ್ಟಿದ್ದಾರೆ ಎಂದು ಸ್ವಪಕ್ಷೀಯರ ವಿರುದ್ಧವೇ ಬಿಜೆಪಿಯ ಖಾಯಂ ಭಿನ್ನಮತೀಯ ನಾಯಕ ಹಾಗೂ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಸ್ಫೋಟಕ ಆರೋಪ ಮಾಡಿದ್ದಾರೆ.

ನಗರದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರವನ್ನು ಕೆಡವಿ,ತಾವು ಸಿಎಂ ಆಗಬೇಕೆಂದು ಬಿಜೆಪಿಯ ನಾಯಕರೊಬ್ಬರು ಒಂದು ಸಾವಿರ ಕೋಟಿ ರೂ. ರೆಡಿ ಮಾಡಿಕೊಂಡಿದ್ದಾರೆ.ಡಿಸೆಂಬರ್ ತಿಂಗಳಿನಲ್ಲಿ ಕಾಂಗ್ರೆಸ್ ಸರ್ಕಾರ ಬಿದ್ದು ಹೋಗಲಿದೆ ಎಂದು ಭಾವಿಸಿಕೊಂಡಿದ್ದಾರೆ ಎಂದು ಪರೋಕ್ಷವಾಗಿ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೆಸರು ಹೇಳದೆ ಆರೋಪಿಸಿದರು.

ಈ ಹಿಂದೆ, ಮುಖ್ಯಮಂತ್ರಿ ಹುದ್ದೆಗಾಗಿ ಬಿಜೆಪಿ ಹೈಕಮಾಂಡ್ ಗೆ ಯಾರು ಎರಡೂವರೆ ಸಾವಿರ ಕೋಟಿ ರೂ. ಕೊಡುತ್ತಾರೋ ಅವರಿಗೆ ಮುಖ್ಯಮಂತ್ರಿ ಪಟ್ಟ ಒಲಿಯುತ್ತದೆ ಎಂದು ಹೇಳುವ ಮೂಲಕ ಭಾರೀ ಸಂಚಲನ ಸೃಷ್ಟಿಸಿದ್ದರು. ಈಗ, ಬಿಜೆಪಿ ನಾಯಕರೊಬ್ಬರು ಸಿಎಂ ಆಗಲು 1000 ಕೋಟಿ ರೂ. ಕೂಡಿಟ್ಟುಕೊಂಡಿದ್ದಾರೆ ಎಂದು ಹೇಳುವ ಮೂಲಕ ಮತ್ತೊಂದು ಬಾಂಬ್ ಸಿಡಿಸಿದ್ದಾರೆ. ಆದರೆ, ಸಾವಿರ ಕೋಟಿ ರೂ. ಕೂಡಿಟ್ಟುಕೊಂಡಿರುವ ಬಿಜೆಪಿ ನಾಯಕ ಯಾರು ಎಂಬುದನ್ನು ಬಹಿರಂಗಪಡಿಲಿಲ್ಲ.

ಕಾಂಗ್ರೆಸ್ ಸರ್ಕಾರವನ್ನು ಕೆಡವಲು ನಮ್ಮ ಪಕ್ಷದವರೇ ಪ್ರಯತ್ನ ನಡೆಸುತ್ತಿದ್ದಾರೆ. ಆದರೆ, ಸರ್ಕಾರ ಅಸ್ಥಿರಗೊಳಿಸುವುದು ಅಂದುಕೊಂಡಷ್ಟು ಸುಲಭವಲ್ಲ. ಅವರು ಮುಖ್ಯಮಂತ್ರಿಯಾಗಲು ನಾವು ಬೆಂಬಲ ಕೊಡಬೇಕಲ್ಲವೇ?. ಕಳೆದ ಬಾರಿಯಂತೆ ಎಲ್ಲಾ ಶಾಸಕರು ಆ ನಾಯಕತ್ವಕ್ಕೆ ಮನ್ನಣೆ ಕೊಡುವುದಿಲ್ಲ.ಸರ್ಕಾರ ರಚನೆ ಅವರು ಅಂದುಕೊಂಡಷ್ಟು ಸರಳವಾಗಿಲ್ಲ ಎಂದು ಹೇಳಿದರು.



ಸಿಎಂ ಆಗಬೇಕೆಂದು ಎಲ್ಲರಿಗೂ ಇಷ್ಟವಿರುತ್ತದೆ. ಆದರೆ, ಅದೃಷ್ಟ ಇದ್ದವರಿಗಷ್ಟೇ ಆಗುತ್ತೆ ಎಂದು ಮಾತು ಆರಂಭಿಸಿದ ಅವರು, ರಾಜ್ಯದಲ್ಲಿ ಇದೇ ವರ್ಷ ಡಿಸೆಂಬರ್ ನಲ್ಲಿ ದೊಡ್ಡದಾದ ರಾಜಕೀಯ ಕ್ರಾಂತಿಯೊಂದನ್ನು ಮಾಡಲು ಹಲವಾರು ಬಿಜೆಪಿಗರು ಪ್ರಯತ್ನಿಸುತ್ತಿದ್ದಾರೆ. ಆಪರೇಷನ್ ಕಮಲ ಮಾಡಿ ಕಾಂಗ್ರೆಸ್ ಸರ್ಕಾರವನ್ನು ಕೆಡವಿ ತಾವು ಮುಖ್ಯಮಂತ್ರಿಯಾಗಲು ಬಿಜೆಪಿಯ ಒಬ್ಬ ನಾಯಕರು 1000 ಕೋಟಿ ರೂ. ಗಳನ್ನು ಕೂಡಿಟ್ಟುಕೊಂಡಿಟ್ಟುಕೊಂಡಿದ್ದಾರೆ ಎಂದು ಹೇಳಿದ್ದಾರೆ.

ಕೆಲವರಿಗೆ ಶಾಸಕರನ್ನು ಖರೀದಿ ಮಾಡುವುದು ತುಂಬಾ ಸರಳವಾಗಿದೆ. ಏಕೆಂದರೆ ಹಿಂದೆಯೂ ಇದೇ ರೀತಿ ಖರೀದಿ ಮಾಡಿಯೇ ಕೆಲವರು ಎರಡು ಬಾರಿ ಮುಖ್ಯಮಂತ್ರಿಯಾಗಿದ್ದರು. ಅದರ ಚಾಳಿ ಈಗ ಕೆಲವರು ಮುಂದುವರೆಸಿಕೊಂಡು ಹೋಗಲು ಸಜ್ಜಾಗಿದ್ದಾರೆ. ಪಕ್ಷದ ಹೈ ಕಮಾಂಡ್ ಇದಕ್ಕೆ ಅವಕಾಶ ಮಾಡಿಕೊಡುವುದಿಲ್ಲ ಎಂದು ಯತ್ನಾಳ್ ಹೇಳಿದರು.ಕೆಲವರಿಗೆ ಯಾರು ಬೇಕಾಗಿಲ್ಲ. ಮುಖ್ಯಮಂತ್ರಿ ಗಾದಿ ಬೇಕಾಗಿದೆ ಅಷ್ಟೇ.ನಮಗೆ ಪಕ್ಷದ ಹಿತ ಮುಖ್ಯ.ಸ್ಥಾನಮಾನಕ್ಕಾಗಿ ಪಕ್ಷವನ್ನು ಒಬ್ಬರ ಕೈಯಲ್ಲಿ ಕೊಡಲು ಸಾಧ್ಯವಿಲ್ಲ. ಹಿಂದೆ ಒಬ್ಬರಿಗೆ ಎಲ್ಲವನ್ನೂ ಕೊಟ್ಟಿದ್ದಕ್ಕೆ ಏನಾಗಿದೆ ಎಂಬುದು ಎಲ್ಲರಿಗೂ ಗೊತ್ತಿದೆ.ಆದರೆ, ಆಪರೇಷನ್ ಕಮಲಕ್ಕೆ ನನ್ನ ಸಮ್ಮತಿಯಿಲ್ಲ ಎಂದು ಹೇಳಿದ ಅವರು, ಕಳೆದ ಬಾರಿ ಆಪರೇಷನ್ ಕಮಲ ಮಾಡಿದಾಗ ಬಂದಿದ್ದ 17 ಮಂದಿಯಿಂದಲೇ ಬಿಜೆಪಿಯ ಅವಸಾನವಾಗಿದ್ದು.

ಈಗ ಮತ್ತೆ ಅಂಥ ಪರಿಸ್ಥಿತಿ ಬರುವುದು ಬೇಡ ಎಂದರು. ಕಾಂಗ್ರೆಸ್ ಸರ್ಕಾರ ಬಿದ್ದ ಸಂದರ್ಭದಲ್ಲಿ ನಾವು ಚುನಾವಣೆಗೆ ಹೋಗಬೇಕು. ಜನರ ಆಶೀರ್ವಾದ ಪಡೆದು ಗೆದ್ದು ಅಧಿಕಾರಕ್ಕೆ ಬರಬೇಕು. ಆ ಮೂಲಕ, ಆಪರೇಷನ್ ಕಮಲ ಮುಂತಾದ ಭ್ರಷ್ಟಾಚಾರ ವ್ಯವಸ್ಥೆಯನ್ನು ಕೊನೆಗಾಣಿಸಬೇಕು ಎಂದು ಅವರು ಗುಡುಗಿದರು.ಬೆಳಗಾವಿಯಲ್ಲಿ ಸಭೆ ಆದಮೇಲೆ ರಾಷ್ಟ್ರೀಯ ಸ್ವಯಂ ಸಂಘದ ಸಭೆ ಆಗಿದೆ ಅಲ್ಲಿ ಎಲ್ಲಾ ಹೇಳಿದ್ದವೆ.ನಮ್ಮ ಪಕ್ಷದ ಮುಖಂಡರಿಗೆ ತಿಳಿಸುವ ಕೆಲಸ ಮಾಡಿದ್ದೇವೆ.ಯಾರು ಬಿಜೆಪಿ ಮಹಾನ್ ನಾಯಕರು ಯಾರು ಬರುವುದಿಲ್ಲ. ದಾವಣಗೆರೆ ಯಲ್ಲಿ ಗಣೇಶ್ ವೇಳೆ ಗಲಾಟೆ ಆಗಿದೆ ಅದರ ಸಂಬಂದ ಬಂದಿದ್ದೇವೆ ಎಂದು ಯತ್ನಾಳ್ ಹೇಳಿದರು.

ಪುಟ 2

## ಫಾಸ್ಟ್ ನ್ಯೂಸ್

### ಸರ್ಕಾರ ಉರುಳಿಸಲು ನಮ್ಮವರೇ 1000 ಕೋಟಿ ಮೀಸಲಿಟ್ಟಿದ್ದಾರೆ: ಯತ್ನಾಳ್

» ಮೊದಲ ಪುಟದಿಂದ

ಈ ಹಿಂದೆ, ಬಿಜೆಪಿ ಹೈಕಮಾಂಡ್ ಬಗ್ಗೆ ಹಾಗೂ ರಾಜ್ಯದ ಬಿಜೆಪಿಯ ಅಧ್ಯಕ್ಷ ವಿಜಯೇಂದ್ರ ಹಾಗೂ ಯಡಿಯೂರಪ್ಪನವರ ಕುಟುಂಬದ ಬಗ್ಗೆ ಆಗಾಗ ವಿವಾದಾತ್ಮಕ ಹೇಳಿಕೆ ನೀಡುತ್ತಲೇ ಬಂದಿರುವ ಅವರು, ಬಿಜೆಪಿಗೆ ಭಾರೀ ಮುಜುಗರ ತಂದಿದ್ದಾರೆ. ಕೆಲವು ಸಂದರ್ಭಗಳಲ್ಲಿ ತಮ್ಮ ವಿರುದ್ಧ ಪಕ್ಷ ಕ್ರಮ ಕೈಗೊಳ್ಳಲಿ ನೋಡೋಣ ಎಂದು ಸವಾಲು ಹಾಕಿದ್ದೂ ಉಂಟು. ಈಗಾಗಲೇ ರಾಜ್ಯ ಬಿಜೆಪಿಯಿಂದ ಯತ್ನಾಳ್ ಅವರಿಗೆ ಎಚ್ಚರಿಕೆ ಸಂದೇಶ ಬಂದಿತ್ತು. ಆದರೆ, ಈಗ ಪುನಃ ಅವಹೇಳನಕಾರಿ ಹೇಳಿಕೆ ನೀಡಿರುವುದನ್ನು ಬಿಜೆಪಿ ನಾಯಕತ್ವ ಹೇಗೆ ಸ್ವೀಕರಿಸುತ್ತದೆ, ಯಾವ ರೀತಿ ಪ್ರತಿಕ್ರಿಯೆ ಮಾಡುತ್ತದೆ ಎಂಬುದನ್ನು ಕಾದು ನೋಡಬೇಕಿದೆ.

### ಸೆ. 30ರಿಂದ ರಾಜ್ಯ ಗ್ರಾಮ ಆಡಳಿತಾಧಿಕಾರಿಗಳ ಸಾಮೂಹಿಕ ರಜೆ

» ಬೆಂಗಳೂರು

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಾಜ್ಯದ ಎಲ್ಲ ಗ್ರಾಮ ಆಡಳಿತಾಧಿಕಾರಿಗಳು ಇದೇ 30ರಿಂದ ಒಂದು ತಿಂಗಳು ಸಾಮೂಹಿಕ ರಜೆ ಹಾಕಿ, ಪ್ರತಿಭಟನೆ ನಡೆಸಲು ಸಿದ್ಧತೆ ನಡೆಸಿದ್ದಾರೆ. ಕಂದಾಯ ಇಲಾಖೆಗೆ ಸೇರಿದ್ದರೂ, ಅನ್ಯ ಇಲಾಖೆಗಳ ಕಾರ್ಯದೊತ್ತಡವೇ ಹೆಚ್ಚಾಗಿದೆ. ಎಂದಿನ ಕೆಲಸದ ಜತೆಗೆ 17 ಆಯಪ್‌ಗಳಲ್ಲಿ ವಿವಿಧ ದತ್ತಾಂಶಗಳನ್ನು ನಮೂದಿಸುವ ಕೆಲಸ ನೀಡಲಾಗಿದೆ. ಅಗತ್ಯ ಮೂಲಸೌಕರ್ಯವೂ ಇಲ್ಲ. ಈ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಒತ್ತಾಯಿಸಲು ಪ್ರತಿಭಟಿಸಲಾಗುತ್ತದೆ' ಎಂದು ಗ್ರಾಮ ಆಡಳಿತಾಧಿಕಾರಿಗಳ ಸಂಘ ತಿಳಿಸಿದೆ. 'ಇದೇ 26, 27ರಂದು ರಾಜ್ಯದಾದ್ಯಂತ ತಾಲ್ಲೂಕು ಕಚೇರಿಗಳ ಎದುರು, 28ರಂದು ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಲಾಗಿದೆ. 29ರಂದೂ ಪ್ರತಿಭಟನೆ ನಡೆಸಲಿದ್ದು, 30ರಿಂದ ಒಂದು ತಿಂಗಳು ಸಾಮೂಹಿಕವಾಗಿ ರಜೆ ಹಾಕಲು ನಿರ್ಧರಿಸಲಾಗಿದೆ' ಎಂದು ಸಂಘವು ತಿಳಿಸಿದೆ.

### ಎನ್.ಬಿ.ಬಾಲರಾಜು ಹೃದಯಾಘಾತದಿಂದ ನಿಧನ

» ಚಳ್ಳಕೆರೆ

ತಾಲ್ಲೂಕಿನ ಹಿರಿಯ ಮಾಜಿ ದೈಹಿಕ ಶಿಕ್ಷಕ, ಬಿಜೆಪಿಯ ಹಿರಿಯ ಮುಖಂಡ, ನಗರಂಗೆರೆ ಎನ್.ಬಿ.ಬಾಲರಾಜು(74) ಅನಾರೋಗ್ಯ ನಿಮಿತ್ತ ನಗರದ ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿ, ತೀರ್ವ ಹೃದಯಾಘಾತದಿಂದ ಆಸ್ಪತ್ರೆಯಲ್ಲಿ ಭಾನುವಾರ ಮೃತಪಟ್ಟಿದ್ದಾರೆ. ಕಾಟಪ್ಪನಹಟ್ಟಿಯ ಮೂಲನಿವಾಸಿಗಳಾದ ಎನ್.ಬಿ.ಬಾಲರಾಜು



ಮೀರಸಾಬಿಹಳ್ಳಿ ಗ್ರಾಮದ ರಾಣಿಕೆರೆ ವಿದ್ಯಾಸಂಸ್ಥೆಯಲ್ಲಿ ದೈಹಿಕ ಶಿಕ್ಷಕರಾಗಿ ಹಲವಾರು ವರ್ಷಗಳ ಕಾಲ ಕಾರ್ಯನಿರ್ವಹಿಸಿ ನಿವೃತ್ತರಾಗಿದ್ದರು. ನಿವೃತ್ತಿ ನಂತರ ರಾಜಕೀಯ ಕ್ಷೇತ್ರವನ್ನು ದಿವಂಗತ ಮಾಜಿ ಶಾಸಕ ತಿಪ್ಪೇಸ್ವಾಮಿ ಮಾರ್ಗದರ್ಶನದಲ್ಲಿ ಬಿಜೆಪಿ ಪಕ್ಷದ ಹಿರಿಯ ಮುಖಂಡರಾಗಿ ಸಂಘಟನೆಯಲ್ಲಿ ತೊಡಗಿದ್ದರು. ತಾಲ್ಲೂಕು ನಿವೃತ್ತ ನೌಕರರ ಸಂಘದ ಮನೋರಂಜನಾ ಕ್ಲಬ್‌ನ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ದಿವಂಗತ ಬಾಲರಾಜು ಪತ್ನಿ ಸುವರ್ಣಮ್ಮ, ನಾಲ್ವರು ಹೆಣ್ಣು ಮಕ್ಕಳು, ಓರ್ವ ಪುತ್ರ ಪಾಲನೇತ್ರನಾಯಕ( ನಗರಸಭೆ ಮಾಜಿ ನಾಮಿನಿ ಸದಸ್ಯ) ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಮೃತ ಅಂತ್ಯಕ್ರಿಯೆ ಸೆ.30ರ ಸೋಮವಾರ ಬೆಳಗ್ಗೆ ನಗರಂಗೆರೆ ಅವರ ತೋಟದಲ್ಲಿ ನಡೆಯುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ದಾಖಲೆ ಬಿಡುಗಡೆ; ಕುಮಾರಸ್ವಾಮಿ ತಡೆದವರು ಯಾರು?: ಡಿಕೆಶಿ

» ಕನಕಪುರ/ಬೆಂಗಳೂರು

ತಮ್ಮ ಬಳಿ ಇರುವ ದಾಖಲೆಗಳನ್ನು ಬಿಡುಗಡೆ ಮಾಡಿದರೆ ಸರ್ಕಾರದ ಏಳು ಮಂತ್ರಿಗಳು ರಾಜೀನಾಮೆ ನೀಡಬೇಕಾಗುತ್ತದೆ ಎಂಬ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಡಿಸಿಎಂ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದ್ದಾರೆ. ದಾಖಲೆ ಬಿಡುಗಡೆ ಮಾಡಬೇಡಿ ಎಂದು ಅವರನ್ನು ಹಿಡಿದುಕೊಂಡವರು ಯಾರು ಎಂದು ಪ್ರಶ್ನಿಸಿದ್ದಾರೆ.

### 400 ಬಸ್ ಖರೀದಿ: ಸಚಿವ ರಾಮಲಿಂಗರೆಡ್ಡಿ

» ರಬಕವಿ-ಬನಹಟ್ಟಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಅಭಿವೃದ್ಧಿಗಾಗಿ ಈ ಬಾರಿಯೂ 400 ಬಸ್ ಗಳ ಖರೀದಿಸಲಾಗುವುದು. ಅದೇ ರೀತಿ ಅಂದಾಜು 9 ಸಾವಿರ ಮಂದಿಯಷ್ಟು ಸಿಬ್ಬಂದಿ ನೇಮಕ ಮಾಡಿಕೊಳ್ಳಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ನಂಜನಗೂಡು ರಸಬಾಳೆ, ಮೈಸೂರು ಮಲ್ಲಿಗೆ, ಮೈಸೂರು ವೀಳ್ಯದೆಲೆ, ಈರನಗೆರೆ ಬದನೆಕಾಯಿ ಮೈಸೂರಿನ ಹೆಮ್ಮೆಯ ಸಾಂಪ್ರದಾಯಿಕ ಬೆಳೆಗಳು: ಸಿ.ಎಂ.ಸ್ಮರಣೆ

# ಒಂದೆರಡು ತಿಂಗಳು ರಾಜಕೀಯವಾಗಿ ತೊಂದರೆ ಕೊಡಬಹುದು: ಆದ್ರೆ ಇದಕ್ಕೆಲ್ಲಾ ಹೆದರೋನು ನಾನಲ್ಲ

» ಮೈಸೂರು

ನಂಜನಗೂಡು ರಸಬಾಳೆ, ಮೈಸೂರು ಮಲ್ಲಿಗೆ, ಮೈಸೂರು ವೀಳ್ಯದೆಲೆ, ಈರನಗೆರೆ ಬದನೆಕಾಯಿ ಮೈಸೂರಿನ ಹೆಮ್ಮೆಯ ಸಾಂಪ್ರದಾಯಿಕ ಬೆಳೆಗಳಾಗಿದ್ದು

ಈ ಬೆಳೆಗಳ ರಕ್ಷಣೆ, ವಿಸ್ತರಣೆಗೆ ಸರ್ಕಾರದಿಂದ ಕಾರ್ಯಕ್ರಮ ಘೋಷಣೆ ಮಾಡ್ತೇನೆ ಎಂದು ಸಿ.ಎಂ.ಸಿದ್ದರಾಮಯ್ಯ ಭರವಸೆ ನೀಡಿದರು.

ಮೈಸೂರು ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಅಶೋಕಪುರಂನಲ್ಲಿ ನಡೆದ ಕಾರ್ಯಕ್ರಮದಲ್ಲಿ 245 ವೀಳ್ಯದೆಲೆ ಬೆಳೆಗಾರರಿಗೆ ತಲಾ 0.5 ಗುಂಟೆ ಜಾಗ ನೀಡುವುದು ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಹಾಗೂ ದೊಡ್ಡಗರಡಿ, ಚಿಕ್ಕಗರಡಿ ಆವರಣಗಳಲ್ಲಿ ವ್ಯಾಯಾಮ ಶಾಲೆ, ಸಭಾಭವನ, ವಾಣಿಜ್ಯ ಸಂಕೀರ್ಣ ನಿರ್ಮಾಣ, ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ದುರಸ್ಥಿ ಕಾರ್ಯಗಳನ್ನು ಉದ್ಘಾಟಿಸಿ ಮಾತನಾಡಿದರು.

### ರಾಜಕೀಯವಾಗಿ ತೊಂದರೆ ಕೊಡಬಹುದು- ಆದರೆ ನನ್ನನ್ನು ಅಲ್ಲಾಡಿಸಲು ಸಾಧ್ಯವಿಲ್ಲ

ನನ್ನ ಆತ್ಮಸಾಕ್ಷಿ ಸರಿಯಾಗಿದೆ. ಆತ್ಮಸಾಕ್ಷಿಯಾಗಿ ನಾನು ಸರಿಯಾಗಿದ್ದೀನಿ. ಹೀಗಾಗಿ ನಾನು ಹೆದರುವ, ಜಗ್ಗುವ-ಬಗ್ಗುವ ಪ್ರಶ್ನೆಯೇ ಇಲ್ಲ ಎಂದು ಃಎಕ-ಎಆಖ ಗೆ ನೇರ



ತೊಡೆತಟ್ಟಿ ಹೇಳಿದರು. ಜನರ ಆಶೀರ್ವಾದ, ನಿಮ್ಮೆಲ್ಲರ ಬೆಂಬಲ ಇರುವವರೆಗೂ ನಾನು ಅಲ್ಲಾಡುವುದಿಲ್ಲ ಎಂದರು. ಬಹಳ ಜನ ಬಂದು ಬಂದು ನನಗೆ, "ಧೈರ್ಯವಾಗಿರಿ, ರಾಜೀನಾಮೆ ಕೊಡಬೇಡಿ" ಅಂತಾರೆ. ನಾನು ಇದಕ್ಕೆಲ್ಲಾ ಹೆದರುವವನೇ ಅಲ್ಲ. ರಾಜಕೀಯವಾಗಿ ನನಗೆ ಒಂದೆರಡು ತಿಂಗಳು ತೊಂದರೆ ಕೊಡಬಹುದು. ಆದರೆ ಕಾನೂನಾತ್ಮಕವಾಗಿ ನಾನು ಗೆದ್ದೇ ಗೆಲ್ತೇನೆ. ರಾಜಕೀಯವಾಗಿ ಇದನ್ನೆಲ್ಲಾ ಎದುರಿಸಿ ನಿಲ್ಲೋದು ನನಗೆ ಗೊತ್ತಿದೆ ಎಂದು ಘೋಷಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ, ಶಾಸಕರಾದ ಶ್ರೀವತ್ಸ, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪಾ ಜ್ಞಾನ ಪ್ರಕಾಶ್ ಸ್ವಾಮೀಜಿ, ವಿಧಾನ ಪರಿಷತ್ ಸದಸ್ಯರಾದ ಡಾ.ತಿಮ್ಮಯ್ಯ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

ಅಶೋಕಪುರಂನ ಅಭಿವೃದ್ಧಿಗಾಗಿ ಅಗತ್ಯ ಇರುವ ಎಲ್ಲಾ ಕಾರ್ಯಕ್ರಮಗಳ ಪಟ್ಟಿ ಮಾಡಲು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಅವರಿಗೆ ಸೂಚಿಸಿದ್ದೇನೆ. ಅಗತ್ಯ ಅನುದನ ಕೊಡಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ನಾವೆಲ್ಲಾ ಅಂಬೇಡ್ಕರ್ ವಾದಿಗಳು. ಅವಕಾಶಗಳಿಂದವಂಚಿತರಾದವರೆಲ್ಲರಿಗೂ ಸಮಾನ ಅವಕಾಶ ಸಿಗಬೇಕು ಎನ್ನುವುದು ನಮ್ಮ ಸಂವಿಧಾನದ ಆಶಯ ಎಂದರು.

ಸಂವಿಧಾನ ಜಾರಿ ಸಭೆಯಲ್ಲಿ ಅಂಬೇಡ್ಕರ್ ಅವರು ಮಾಡಿದ 10 ಸಂಪುಟಗಳ ಭಾಷಣವನ್ನು ನಾನು ಕನ್ನಡಕ್ಕೆ ಮಾಡಿಸಿದ್ದೇನೆ. ಈ ಎಲ್ಲವನ್ನೂ ಪ್ರತಿಯೊಬ್ಬರೂ ಓದಬೇಕು ಎಂದು ಕರೆ ನೀಡಿದರು.ನಾನು ಮುಖ್ಯಮಂತ್ರಿ ಆಗಿದ್ದೇ ಅಂಬೇಡ್ಕರ್ ಅವರ ಸಂವಿಧಾನದಿಂದ ಎಂದು ಸಂವಿಧಾನಕ್ಕೆ ಧನ್ಯತೆ ಅರ್ಪಿಸಿದರು.

ದೇಶದ ಬಜೆಟ್ ಗಾತ್ರ 48 ಲಕ್ಷ ಕೋಟಿ. ಇದರಲ್ಲಿ ಅಭಿವೃದ್ಧಿಗೆ 28 ಕೋಟಿ ಖರ್ಚಾಗುತ್ತದೆ. ಇದರಲ್ಲಿ ಶೇ24 ರಷ್ಟು ಹಣವನ್ನು ದಲಿತರ ಅಭಿವೃದ್ಧಿಗೆ ಕೊಡಬೇಕಿತ್ತು. ಆದರೆ ಕೊಡುತ್ತಿರುವುದು ಕೇವಲ 60 ಸಾವಿರ ಕೋಟಿ ಎಂದರು. ಆದರೆ ನಮ್ಮ ರಾಜ್ಯದ ಅಭಿವೃದ್ಧಿ ಬಜೆಟ್ ನಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಹಣ ಮೀಸಲಿಟ್ಟಿದ್ದೀವಿ. ಸಮಾಜದಲ್ಲಿ ಎಲ್ಲರಿಗೂ ಸಮಾನ ಅವಕಾಶಗಳನ್ನು ಒದಗಿಸಿಕೊಡುವ ಭಾಗವಾಗಿ ಈ ಹಣ ಮೀಸಲು ಎಂದರು.

ಬಜೆಟ್ ನಲ್ಲಿ 59000 ಕೋಡಿ ಹಣವನ್ನು ಗ್ಯಾರಂಟಿಗಳ ಜಾರಿಗಾಗಿ ಮೀಸಲಿಟ್ಟಿದ್ದೇನೆ. ಇಷ್ಟೂ ಹಣ ಎಲ್ಲಾ ಜಾತಿ, ಎಲ್ಲಾ ಧರ್ಮ ಮತ್ತು ಎಲ್ಲಾ ವರ್ಗದವರಿಗೂ ತಲುಪುತ್ತಿದೆ. ವಿರೋಧ ಪಕ್ಷಗಳು ಎಷ್ಟೇ ಸುಳ್ಳು, ಅಪಪ್ರಚಾರ ಮಾಡಿದರೂ ಈ ಗ್ಯಾರಂಟಿಗಳು ನಿಲ್ಲುವುದಿಲ್ಲ ಎಂದು ಪುನರುಚ್ಚಸಿದರು.

# ಧರ್ಮ ಮೀರಿ ಸಾಹಿತ್ಯದ ಕೆಲಸ ಮಾಡೋಣ

» ಚಿತ್ರದುರ್ಗ

ಸಾಹಿತ್ಯಕ್ಕೂ ಜಾತಿ ಧರ್ಮಕ್ಕೂ ಒಂದಕ್ಕೊಂದು ಸಂಬಂಧವಿಲ್ಲ. ಜಾತಿ ಧರ್ಮ ಮೀರಿ ಎಲ್ಲರೂ ಸಾಹಿತ್ಯದ ಕೆಲಸ ಮಾಡಬೇಕೆಂದು ಹಿರಿಯ ನ್ಯಾಯವಾದಿ ಹಾಗೂ ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ ಗೌರವಾಧ್ಯಕ್ಷ ಬಿ.ಕೆ.ರಹಮತ್‌ವುಲ್ಲಾ ಹೇಳಿದರು.




ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆಯ ಹದಿನೆಂಟನೆ ವಾರ್ಷಿಕೋತ್ಸವದ ಅಂಗವಾಗಿ ಪತ್ರಕರ್ತರ ಭವನದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಸಾಹಿತ್ಯ ಹಾಗೂ ಸಾಂಸ್ಕೃತಿಕ ಹಬ್ಬ ಉದ್ಘಾಟಿಸಿ ಮಾತನಾಡಿದರು.

ಜಾತಿ ಧರ್ಮ ಎನ್ನುವುದಕ್ಕಿಂತ ಮುಖ್ಯವಾಗಿ ಸಾಹಿತ್ಯದ ಸೇವೆ ಮಾಡುವ ಕೈಗಳು ಹೆಚ್ಚಾಗಬೇಕು. ದೇಶಭಕ್ತಿ, ಪರಿಸರ ಪ್ರಜ್ಞೆ ಎಲ್ಲರಲ್ಲಿಯೂ ಮೂಡಬೇಕು. ಪಂಪ, ರನ್ನ, ಕುವೆಂಪು ಇವರುಗಳು ಕನ್ನಡಕ್ಕೆ ಸಲ್ಲಿಸಿರುವ ಸೇವೆ ಅಮೋಘವಾದುದು. ಡಾ.ನಿಸಾರ್ ಅಹಮದ್ ಹುಟ್ಟಿನಿಂದ ಮುಸಲ್ಮಾನರಾದರೂ ಅವರೊಬ್ಬ ಹೆಸರಾಂತ ಕವಿಯಾಗಿ ಕನ್ನಡದ ಸೇವೆ ಮಾಡಿದ್ದರಿಂದ ಇಂದಿಗೂ ಎಲ್ಲರ ಮನದಲ್ಲಿ ಚಿರಸ್ಥಾಯಿಯಾಗಿ ಉಳಿದಿದ್ದಾರೆಂದು ಸ್ಮರಿಸಿದರು.

ನಡುಗನ್ನಡದಲ್ಲಿ ಕುಮಾರವ್ಯಾಸ, ರಾಘವಾಂಕ, ಹರಿಹರ ಇವರುಗಳು ದೇವರು ಧರ್ಮ ಪುರಾಣವನ್ನು ರಚಿಸಿದ್ದಾರೆ.. ಪ್ರಗತಿಶೀಲ ಸಾಹಿತ್ಯದ ಚಿಂತನೆಯಿದೆ. ನವ್ಯ ಸಾಹಿತ್ಯದಲ್ಲಿ ಯಾವುದು ಬೇಕು, ಯಾವುದು ಬೇಡ ಎನ್ನುವ ಪರಿಕಲ್ಪನೆಯಿದೆ. ಈಗಿನ ದಲಿತ ಮತ್ತು ಬಂಡಾಯ ಸಾಹಿತ್ಯದ ಕಾಲದಲ್ಲಿ ಬಂಜಗೆರೆ ಜಯಪ್ರಕಾಶ್ ಹಾಗೂ ದೇವನೂರು ಮಹದೇವ ಇವರುಗಳ ಕೊಡುಗೆಯೂ ಅಪಾರ. ಗೋವಿಂದ ಪೈ ಮೊದಲನೆ ರಾಷ್ಟ್ರಕವಿ ಎಂದು ಗುರುತಿಸಿಕೊಂಡಿದ್ದು, ಹೆಗ್ಗಳಿಕೆಯಾಗಿದೆ ಸಾಹಿತ್ಯಕ್ಕೆ ಎಲ್ಲರನ್ನು ಒಂದೂಡಿಸಿ ಸೌಹಾರ್ಧತೆಯಿಂದ ಬದುಕಿಸುವಂತ ಶಕ್ತಿಯಿದೆ.


ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ ಆರಂಭದಲ್ಲಿ ಚಿಕ್ಕ ಗಿಡವಾಗಿ ಹುಟ್ಟಿಕೊಂಡಿದ್ದು, ಇಂದು ದೊಡ್ಡ ಆಲದ ಮರವಾಗಿ ಬೆಳೆದು ನಿಂತಿದೆ. ಇದಕ್ಕೆ ಎಲ್ಲರ ಸಹಕಾರ ಕಾರಣ ಎಂದು ಹರ್ಷ ವ್ಯಕ್ತಪಡಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಕೆ.ಎಂ.ವೀರೇಶ್ ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆಯ ಬಗ್ಗೆ ಎಲ್ಲರಲ್ಲೂ ಅಭಿಮಾನವಿರಬೇಕು ವಚನ ಸಾಹಿತ್ಯ, ಶರಣ ಸಾಹಿತ್ಯ ಹನ್ನೆರಡನೆ ಶತಮಾನದ ಬಸವಾದಿಶರಣರ ಪರಿಕಲ್ಪನೆ. ಯಾವುದೇ ಒಂದು ಸಂಸ್ಥೆ ವೇದಿಕೆಯನ್ನು ಕಟ್ಟುವಾಗ ಅನೇಕ ಹಿಂಸೆ ನೋವು ಸಂಕಟ ಅವಮಾನ ಅನುಭವಿಸಬೇಕಾಗುತ್ತದೆ. ನಂತರ ಸನ್ಮಾನ ಹುಡುಕಿಕೊಂಡು ಬರುತ್ತದೆ.. ಶೈಕ್ಷಣಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ನನ್ನ ಸೇವೆಯನ್ನು ಗುರುತಿಸಿ ಮೈಸೂರು ವಿಶ್ವವಿದ್ಯಾನಿಲಯ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ ಎಂದು ನುಡಿದರು.

ಗೌರವ ಡಾಕ್ಟರೇಟ್ ಪ್ರಶಸ್ತಿಯಿಂದ ನನ್ನ ಮೇಲೆ ಜವಾಬ್ದಾರಿ ಜಾಸ್ತಿಯಾಗಿದೆ. ಸಾಹಿತ್ಯದ ಸೇವೆ ಮಾಡುವ ಮನಸ್ಸುಗಳು ಹೆಚ್ಚಾಗಬೇಕು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷನಾಗಿದ್ದಾಗ ಚಿತ್ರದುರ್ಗದಲ್ಲಿ ಎಪ್ಪತ್ತೈದನೆ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿ ನಡೆಸಿದ್ದೇನೆ. ಈಗ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಸಮ್ಮೇಳನ ಚಿತ್ರದುರ್ಗದಲ್ಲಿ ನಡೆಸುವ ಅವಕಾಶ ಸಿಕ್ಕಿದೆ ಎಂದು ಹೇಳಿದರು.

ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ ಸಂಸ್ಥಾಪಕಿ ದಯಾಪುತ್ತೂರ್ಕರ್‌ಪ್ರಾಸ್ತಾವಿಕವಾಗಿಮಾತನಾಡಿ ಹದಿನೆಂಟು ವರ್ಷಗಳಿಂದಲೂ ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆಯನ್ನು ಮುನ್ನಡೆಸಿಕೊಂಡು ಬರುತ್ತಿರುವುದಕ್ಕೆ ಅನೇಕರ ಸಹಕಾರವಿದೆ. ಎಸ್.ಎಚ್.ಶಫಿವುಲ್ಲಾರವನ್ನು ವೇದಿಕೆಗೆ ಅಧ್ಯಕ್ಷರನ್ನಾಗಿ ಮಾಡಬೇಕಾದರೆ ಅನೇಕರು ಅಸಮಾಧಾನ ಹೊರ ಹಾಕಿದರು. ಆದರೆ ಅವರು ವೇದಿಕೆಯ ಅಧ್ಯಕ್ಷ ಸ್ಥಾನ ವಹಿಸಿಕೊಂಡ ಮೇಲೆ ಒಳ್ಳೊಳ್ಳೆ ಕಾರ್ಯಕ್ರಮಗಳು ನಡೆಯುತ್ತಾ ಬರುತ್ತಿರುವುದನ್ನು ಗಮನಿಸಿದರೆ ಎಲ್ಲಾ ಜಾತಿ ಧರ್ಮದವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಒಟ್ಟೊಟ್ಟಿಗೆ ಕರೆದೊಯ್ಯುತ್ತಿದ್ದಾರೆನ್ನುವುದು ಗೊತ್ತಾಗುತ್ತಿದೆ. ಜಾತಿ ಧರ್ಮಕ್ಕಿಂತ ಮುಖ್ಯವಾಗಿ ಪ್ರತಿಭೆಯನ್ನು ಗುರುತಿಸುವುದು ನಮ್ಮ ವೇದಿಕೆಯ ಉದ್ದೇಶ. ಜಾತಿ, ಅಂತಸ್ತು, ಅಲಂಕಾರದಿಂದ ಯಾರನ್ನು ಅಳೆಯಬಾರದು. ನಿಜವಾದ ಪ್ರತಿಭೆ ಬಹುದಿನಗಳ ಕಾಲ ಉಳಿಯುತ್ತದೆ ಎಂದು ತಿಳಿಸಿದರು.

### ಶೋಭಾಯಾತ್ರೆ ನಂತರ ನಗರ ಶುಚಿಗೊಳಿಸುವ ಪೌರ ಕಾರ್ಮಿಕರಿಗೆ ಸನ್ಮಾನಿಸಿ ಗೌರವ ಧನ ನೀಡಿ



» ಚಿತ್ರದುರ್ಗ

ವಿಶ್ವಹಿಂದೂ ಪರಿಷತ್ ಹಾಗೂ ಬಜರಂಗದಳದ ವತಿಯಿಂದ ಪ್ರತಿ ವರ್ಷವೂ ಚಿತ್ರದುರ್ಗದಲ್ಲಿ ಹಿಂದೂ ಮಹಾಗಣಪತಿ ಪ್ರತಿಷ್ಠಾಪಿಸಿ ವಿಸರ್ಜಿಸುವುದು ಕಳೆದ ಹದಿನೆಂಟು ವರ್ಷಗಳಿಂದಲು ಹಬ್ಬದ ರೀತಿಯಲ್ಲಿ ನಡೆದುಕೊಂಡು ಬರುತ್ತಿದೆ. ನಾಡಿನಾದ್ಯಂತ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಳ್ಳುವುದರ ಜೊತೆಗೆ ದೇಶ ವಿದೇಶಗಳಿಂದಲೂ ಆಗಮಿಸುವ ಭಕ್ತರು ಮೆರವಣಿಗೆಯಲ್ಲಿ ಕುಣಿದು ಕುಪ್ಪಳಿಸಿ ಸಂಭ್ರಮಿಸುತ್ತಿರುವುದು ನಿಜಕ್ಕೂ ಸಂತೋಷದ ಸಂಗತಿ.

ಗಣಪತಿ ವಿಸರ್ಜನೆಯ ಮರು ದಿನ ನಗರದಲ್ಲಿ ಲೋಡ್‌ಗಟ್ಟಲೆ ಪಾದರಕ್ಷೆಗಳು, ತಿಂಡಿ ಊಟದ ತಟ್ಟೆಗಳು, ನೀರಿನ ಬಾಟಲ್ ಹಾಗೂ ಪ್ಯಾಕೆಟ್‌ಗಳು ರಸ್ತೆಯುದ್ದಕ್ಕೂ ಚೆಲ್ಲಾಪಿಲ್ಲಿಯಾಗಿ ಬಿದ್ದಿರುವುದನ್ನು ನಗರಸಭೆ ಪೌರ ಕಾರ್ಮಿಕರು ಶುಚಿಗೊಳಿಸುವ ಕಾರ್ಯದಲ್ಲಿ ತೊಡಗುತ್ತಾರೆ. ಹಾಗಾಗಿ ಅಂತಹ ಹೊರಗುತ್ತಿಗೆ ಪೌರ ಕಾರ್ಮಿಕರಿಗೆ ಇಪ್ಪತ್ತು ಸಾವಿರ ರೂ. ಹಾಗೂ ಖಾಯಂ ಪೌರ ಕಾರ್ಮಿಕರಿಗೆ ತಲಾ ಹತ್ತು ಸಾವಿರ ರೂ.ಗಳ ಸಂಭಾವನೆ ನೀಡಿ ಶೋಭಾಯಾತ್ರೆಯ ಮುನ್ನಾ ದಿನ ಸನ್ಮಾನಿಸುವಂತೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಭಾನುವಾರ ವಿಶ್ವಹಿಂದೂ ಪರಿಷತ್ ಹಾಗೂ ಬಜರಂಗದಳದವರಿಗೆ ಮನವಿ ಸಲ್ಲಿಸಿದರು.ಶೋಭಾಯಾತ್ರೆಯ ಮಾರ್ಗದರ್ಶಕ ಬದ್ರಿನಾಥ್, ಉತ್ಸವ ಸಮಿತಿ ಅಧ್ಯಕ್ಷ ನವೀನ್, ಉಮೇಶ್ ಕಾರಜೋಳ, ರವಿ ಇನ್ನು ಅನೇಕರು ಮನವಿ ಸ್ವೀಕರಿಸಿ ಮುಂದಿನ ವರ್ಷದ ಶೋಭಾಯಾತ್ರೆಯಿಂದ ಪೌರ ಕಾರ್ಮಿಕರನ್ನು ಸನ್ಮಾನಿಸುವುದಾಗಿ ಭರವಸೆ ನೀಡಿದರು.ಜಾತಿ ಧರ್ಮ ಮೀರಿ ಎಲ್ಲರೂ ಸಾಹಿತ್ಯದ ಕೆಲಸ ಮಾಡೋಣ; ಬಿ.ಕೆ.ರಹಮತ್‌ವುಲ್ಲಾ

## ಪ್ರಮುಖ ಸುದ್ದಿ

# ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ; ಮಾದಾರ ಚನ್ನಯ್ಯ ಶ್ರೀ

» ಚಿತ್ರದುರ್ಗ

ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ನೀಡುವುದರ ಮೂಲಕ ಸಮಾಜಕ್ಕೆ ಅವರನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸಿ, ಇದಕ್ಕೆ ಸರ್ಕಾರ ಮತ್ತು ಮಠಗಳು ಸಹಾಯವನ್ನು ಮಾಡಲಿವೆ ಎಂದ ಮಾದಾರ ಗುರುಪೀಠದ ಶ್ರೀ ಮಾದಾರ ಚನ್ನಯ್ಯ ಶ್ರೀಗಳು ತಿಳಿಸಿದರು.

ಚಿತ್ರದುರ್ಗ ನಗರದ ಹೊರ ವಲಯದ ಕೇತೇಶ್ವರ ಮಠದ ಬಳಿ ಬಿಡು ಬಿಟ್ಟಿರುವ ಅಲೆಮಾರಿ ಜನಾಂಗದವರಿಗೆ ಬೆಡ್‌ಸಿಟ್ ಮತ್ತು ಅವರ ಮಕ್ಕಳಿಗೆ ಬ್ಯಾಗ್‌ನ್ನು ವಿತರಣೆ ಮಾಡಿ ಮಾತನಾಡಿದ ಅವರು, ಇಂದಿನ ದಿನಮಾನದಲ್ಲಿ ಶ್ರೀಮಂತರು ತಮ್ಮ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಹೋಟೇಲ್ ಗಳಲ್ಲಿ ಆಚರಣೆ ಮಾಡಿಕೊಳ್ಳುತ್ತಾರೆ ಆದರೆ ದಾವಣಗೆರೆಯ ಮಾಜಿ ಸಚಿವರು, ಸಂಸದರು, ಬಿಜೆಪಿ ಮುಖಂಡರಾದ ಜಿ.ಎಂ.ಸಿದ್ದೇಶ್ವರ ರವರ ಪುತ್ರರಾದ ಅನಿತ್‌ಕುಮಾರ್ ರವರ ತಮ್ಮ ಹುಟ್ಟುಹಬ್ಬದ ನಿಮಿತ್ತ ನಮ್ಮ ಮಠಕ್ಕೆ ಬಂದಾಗ ನಿಮ್ಮಗಳ ಬಗ್ಗೆ ತಿಳಿಸಿ ಅವರು ಕಷ್ಟ ಕಾಲದಲ್ಲಿದ್ದಾರೆ ಅವರಿಗೆ ಸಹಾಯವನ್ನು ಮಾಡುವಂತೆ ಮನವಿ ಮಾಡಿದ್ದರ ಮೇರೆಗೆ ಇಂದು ನಿಮಗೆ ಚಳಿಗೆ ಬೆಚ್ಚಗೆ ಇರಲು ಬೆಡ್‌ಸಿಟ್ ನಿಮ್ಮ ಮಕ್ಕಳ ಕಲಿಗೆ ಸಹಾಯವಾಗಲು ಶಾಲಾಬ್ಯಾಗ್‌ನ್ನು ವಿತರಣೆ ಮಾಡಿದ್ದಾರೆ. ಇದು ಉತ್ತಮವಾದ ಕಾರ್ಯವಾಗಿದೆ ಎಂದರು,



ಸಂವಿಧಾನದಲ್ಲಿ ಎಲ್ಲರಿಗೂ ಸಹಾ ಸಮಾನಾವಾದ ಹಕ್ಕುಗಳನ್ನು ನೀಡಿದೆ ಇದನ್ನು ತಿಳಿಸದ ಹಲವಾರು ಜನಾಂಗದವರುಅದರಉಪಯೋಗವನ್ನು ಪಡೆಯುತ್ತಿದ್ದಾರೆ ಆದರೆ ಇನ್ನೂ ಹಲವಾರು ಜನಾಂಗದವರು ಇದರ ಬಗ್ಗೆ ತಿಳಿಯದೇ ಇರುವವರು ಹಕ್ಕುಗಳನ್ನು ಪಡೆಯಲು ಸಾಧ್ಯವಾಗಿಲ್ಲ ಇಂತಹ ಸಮಾಜಗಳು ನಮ್ಮಲ್ಲಿ ಇವೆ ಇವರಿಗೆ ನಾವು ಧ್ವನಿಯಾಗಬೇಕಿದೆ, ಅವರಿಗೆ ಸಹಾಯವನ್ನು ಮಾಡಬೇಕಿದೆ. ಇಂತಹ ಸಮಾಜದಲ್ಲಿ ಅಲೆವಾರಿ ಸಮಾಜವೂ ಒಂದಾಗಿದೆ ಇವರು ತಮ್ಮ ಬದುಕಿಗಾಗಿ ಅಲೆಯುತ್ತಾ ಹೋಗುತ್ತಾರೆ ಒಂದು ಕಡೆಯಲ್ಲಿ ನಿಲ್ಲುವುದಿಲ್ಲ

ಇವರಿಗೆ ನಿಲ್ಲಲು ಜಾಗ ಇಲ್ಲ ಬದುಕಿಗೆ ಆಸರೆ ಇಲ್ಲ ಇಂತಹರ ಜೀವನವನ್ನು ಪಾವನ ಮಾಡಬೇಕಿದೆ ಅದು ನಮ್ಮ ಕೆಲಸವಾಗಬೇಕಿದೆ ಎಂದು ತಿಳಿಸಿದರು. ಇಂದಿನ ದಿನದಲ್ಲಿ ಶ್ರೀಮಂತ ವರ್ಗದವರು ತಮ್ಮ ಹುಟ್ಟು ಹಬ್ಬಗಳನ್ನು ಬೇರೆ ಕಡೆಯಲ್ಲಿ ಆಚರೆಣೆ ಮಾಡುತ್ತಾರೆ ಆದರೆ ಅನಿತ್‌ಕುಮಾರ್‌ರವರ ತಮ್ಮ ಹುಟ್ಟು ಹಬ್ಬದ ಅಂಗವಾಗಿ ನಿಮಗೆ ಸಹಾಯವನ್ನು ಮಾಡಲು ಬಂದಿದ್ದಾರೆ. ಇಥಹವರಿ ಇಂದಿನ ದಿನದಲ್ಲಿ ಸಿಗುವುದು ವಿರಳ. ತಾವು ಬೇರೆಯವರಿಗೆ ದಾನವನ್ನು ಮಾಡಬೇಕು ಸಾದ್ಯವಾಗದಿದ್ದರೆ ಬೇರೆಯವರಿಂದ ದಾನವನ್ನು ಮಾಡಿಸುವ ಗುಣವನ್ನು ಹೊಂದಿರಬೇಕಿದೆ. ನಿಮ್ಮಲ್ಲಿ ಬಹಳಷ್ಟು ಜನ ಶಿಕ್ಷಣವನ್ನು ಕಲಿತಿಲ್ಲ, ಆದರೆ ನಿಮ್ಮ ಮಕ್ಕಳು ಶಿಕ್ಷಣವನ್ನು ಕಲಿಯುವಂತ ವಾತಾವರಣವನ್ನು ಕಲ್ಪಿಸಬೇಕಿದೆ ಸರ್ಕಾರಗಳು ಉಚಿತವಾದ ಶಿಕ್ಷಣವನ್ನು ನೀಡುತ್ತಿದ್ದಾರೆ.ಅದು ಆಗದಿದ್ದರೆ ಇಲ್ಲಿ ಮಠಗಳು ಇವೆ ಇಲ್ಲಿ ತಮ್ಮ ಮಕ್ಕಳನ್ನು ಬಿಟ್ಟರೆ ನಾವು ಶಿಕ್ಷಣವನ್ನು ನೀಡುವುದಾಗಿ ಶ್ರೀಗಳು ಭರವಸೆಯನ್ನು ನೀಡಿದರು.

ಬಿಜೆಪಿ ಮುಖಂಡ ಅನಿತ್ ಕುಮಾರ್ ಮಾತನಾಡಿ, ಶ್ರೀಗಳು ನಮಗೆ ಇಲ್ಲಿನ ಜನತೆಗೆ ಸಹಾಯವನ್ನು ಮಾಡುವಂತೆ ಸೂಚನೆ ನೀಡಿದ್ದರ ಮೇರೆ ನಾವುಗಳು ನಿಮಗೆ ಸಹಾಯವನ್ನು ಮಾಡಲಾಗುತ್ತಿದೆ, ಇಲ್ಲಿನ ಪರಿಸ್ಥಿತಿಯನ್ನು ನೋಡಿದರೆ ಮಳೆ, ಗಾಳಿ ಚಳಿಗೆ ನಿಮ್ಮ ಬದುಕು ಅತಂತ್ರ ಸ್ಥಿತಿಯಲ್ಲಿದೆ. ಇದನ್ನು ಮನಗಂಡ ಶ್ರೀಗಳು ನಿಮಗೆ ಸಹಾಯ ಮಾಡಲು ಸೂಚಿಸಿದರು ಈ ಹಿನ್ನಲೆಯಲ್ಲಿ ನಾವು ನಮ್ಮ ಕೈಲಾದ ಸಹಾಯವನ್ನು ಮಾಡಲಾಗುತ್ತಿದೆ. ನಿಮಗೆ ಜೀವನ ನಡೆಸಲು ಸರಿಯಾದ ವ್ಯವಸ್ಥೆ ಇಲ್ಲವಾಗಿದೆ ದೇಶದ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರು ಇಂತಹ ಜನರಿಗಾಗಿ ವಿಶೇಷವಾದ ಯೋಜನೆಯನ್ನು ರೂಪಿಸಿವುದರ ಮೂಲಕ ಅವರ ಬದಕನ್ನು ಹಸನು ಮಾಡಲು ಮುಂದಾಗಿದ್ದಾರೆ. ನಿಮ್ಮ ಮಕ್ಕಳು ಶಿಕ್ಷಣವನ್ನು ಪಡೆಯುವುದರ ಮೂಲಕ ಉತ್ತಮ ಪ್ರಜೆಗಳಾಗಿ ದೇಶದಲ್ಲಿ ಪ್ರಗತಿಯನ್ನು ಸಾಧಿಸುವಂತಾಗಲಿ ಈಗ ನೀವುಗಳು ಗುಡಿಸಲಿನಲ್ಲಿ ಇದ್ದೀರಾ ಮುಂದೆ ನಿಮ್ಮ ಬದುಕು ಉತ್ತಮ ರೀತಿಯಲ್ಲಿ ಇರುವಂತೆ ನೋಡಿಕೊಳ್ಳಿ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕೇತೇಶ್ವರ ಮಠದ ಶ್ರೀಗಳು ಸೇರಿದಂತೆ ಇತರರು ಭಾಗವಹಿಸಿದ್ದರು.

**ಫಾಸ್ಟ್ ನ್ಯೂಸ್**

## ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ಜನರ ಸಂಕಷ್ಟಕ್ಕೆ ನೆರವಾಗಿ



» **ಚಳ್ಳಕೆರೆ**

ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳಾಸ್ವಸಹಾಯ ಗುಂಪುಗಳ ಆರ್ಥಿಕ ಶಕ್ತಿಯನ್ನು ವೃದ್ಧಿಸುವ ಜೊತೆಗೆ ಇತರೆ ಸಾಮಾಜಿಕ ಸೇವಾ ಚಟುವಟಿಕೆಗಳಲ್ಲೂ ಸಹ ತಮ್ಮದೇಯಾದ ನಿಸ್ವಾರ್ಥ ಸೇವೆ ಸಲ್ಲಿಸಿದ್ದಾರೆ. ಒಕ್ಕೂಟದ ಎಲ್ಲಾ ಹಂತದ ಪದಾಧಿಕಾರಿಗಳು ಪ್ರಾಮಾಣಿಕ, ದಕ್ಷ ಸೇವೆಯಿಂದ ಸಮಾಜದ ಏಳಿಗೆಗೆ ಶ್ರಮಿಸುವ ಸಂಕಲ್ಪವನ್ನು ಮಾಡಬೇಕೆಂದು ಚಿತ್ರದುರ್ಗ ಪ್ರಾದೇಶಿಕ ವಿಭಾಗದ ನಿರ್ದೇಶಕಿ ಬಿ.ಗೀತಾ ತಿಳಿಸಿದರು. ಅವರು, ನಗರದ ಆದಿನಾಥ ಜೈನ ಭವನದಲ್ಲಿ ತಾಲ್ಲೂಕು ಮಟ್ಟದ ಒಕ್ಕೂಟದ ಪದಾಧಿಕಾರಿಗಳ ಸಮಾವೇಶವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಈ ಹಿಂದೇ ಕೇವಲ ಕೆಲವುಪ್ರದೇಶ, ಕೆಲ ವ್ಯಕ್ತಿಗಳಿಗೆ ಮಾತ್ರ ಸೀಮಿತವಾಗಿದ್ದ ಸೇವಾ ಚಟುವಟಿಕೆಗಳು ಇಂದು ನಗರ ಹಾಗೂ ಗ್ರಾಮೀಣ ಪ್ರದೇಶದ ಸಾರ್ವಜನಿಕರ ಆರ್ಥಿಕ ಶಕ್ತಿಯನ್ನು ತುಂಬುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸಿದೆ. ಮಹಿಳಾ ಸ್ವಸಹಾಯಕ ಗುಂಪು ಸೇರಿದಂತೆ ರೈತರು, ಕಾರ್ಮಿಕರು, ಪುರಾತನ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಸಂಸ್ಥೆ ನೆರವಾಗುತ್ತಿದೆ. ಒಕ್ಕೂಟದ ಪದಾಧಿಕಾರಿಗಳು ಆತ್ಮವಿಶ್ವಾಸದಿಂದ ಸಂಸ್ಥೆಯ ಅಭಿವೃದ್ಧಿಗೆ ದುಡಿಯಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷೆ ವಹಿಸಿದ್ದ ಜಿಲ್ಲಾ ಜನಜಾಗೃತಿ ವೇದಿಕೆ ನಿರ್ದೇಶಕ ಕೆ.ಎಂ.ತಿಪ್ಪೇಸ್ವಾಮಿ ಮಾತನಾಡಿ, ಇಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ತಾಲ್ಲೂಕಿನ ಪುಟ್ಟ ಗ್ರಾಮದ, ಪುಟ್ಟ ಓಣಿಯಿಂದ ಹಿಡಿದು ನಗರ ಪ್ರದೇಶದವರೆಗೂ ವಿಸ್ತಾರವಾಗಿದೆ. ಮಹಿಳೆಯನ್ನು ಸ್ವಾವಲಂಭಿಯಾಗಿ ದುಡಿಯುವ ಮಾರ್ಗವನ್ನು ಈ ಸಂಸ್ಥೆ ಕಲ್ಪಿಸಿದೆ. ಒಕ್ಕೂಟದ ಪದಾಧಿಕಾರಿಗಳು ಸಹ ಸಂಸ್ಥೆಯ ಸರ್ವತೋಮುಖ ಅಭಿವೃದ್ಧಿಗೆ ಕಂಕಣಬದ್ಧರಾಗಿ ದುಡಿಯಬೇಕು ಎಂದರು. ಕಾರ್ಯಕ್ರಮದಲ್ಲಿ ನಾಯಕನಹಟ್ಟಿ ಯೋಜನಾಧಿಕಾರಿ ಅಣ್ಣಪ್ಪ, ಎಂ.ಎಸ್.ಮೃತ್ಯುಂಜಯ, ಎಂವೈಟಿಸ್ವಾಮಿ, ಬ್ಯಾಂಕ್ ಆಫ್ ಬರೋಡ ಜಂಟಿ ಸಹಾಯಕ ವ್ಯವಸ್ಥಾಪಕ ಮಂಜಪ್ಪಕಂಪ್ಲಿ, ಜಿಲ್ಲಾ ನಿರ್ದೇಶಕ ಎನ್.ಜನಾರ್ಧನ್, ಲೆಕ್ಕ ಪರಿಶೋಧನಾ ವಿಭಾಗದ ಅಧಿಕಾರಿ ರವಿಹಿತ್ತಲಮನಿ, ರತ್ನಮ್ಮೈಪಾಲ್, ಅಶ್ವತ್ಥ ಮುಂತಾದವರುಪಾಲ್ಗೊಂಡಿದ್ದರು.

## ಗ್ರಾಮ ಆಡಳಿತಾಧಿಕಾರಿ ಪರೀಕ್ಷೆಗೆ 478 ವಿದ್ಯಾರ್ಥಿಗಳು ಗೈರು



» **ಚಳ್ಳಕೆರೆ**

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸೆ.29ರ ಭಾನುವಾರ ಆಯೋಜಿಸಿದ್ದ ಗ್ರಾಮ ಆಡಳಿತಾಧಿಕಾರಿಗಳ ಸ್ಪರ್ಧಾತ್ಮಕ ಪರೀಕ್ಷೆ ನಗರದ ಆರು ಕೇಂದ್ರಗಳಲ್ಲಿ ಯಶಸ್ವಿಯಾಗಿ ನಡೆದಿದ್ದು, ಬಹುತೇಕ ಗ್ರಾಮಾಂತರ ವಿದ್ಯಾರ್ಥಿಗಳು ಪರೀಕ್ಷೆಗೆ ಹೆಚ್ಚು ಹಾಜರಾಗಿದ್ದರು. ನಗರದ ಒಟ್ಟು ಆರು ಕೇಂದ್ರಗಳಲ್ಲಿ 2352 ಪರೀಕ್ಷಾರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಟ್ಟಿದ್ದು, ಆಪೈಕಿ 478 ವಿದ್ಯಾರ್ಥಿಗಳು ಪರೀಕ್ಷೆಗೆ ಗೈರಾಗಿದ್ದು, 1874 ವಿದ್ಯಾರ್ಥಿಗಳು ಪರೀಕ್ಷೆಯನ್ನು ಬರೆದರು. ಸರ್ಕಾರಿ ಪದವಿಪೂರ್ವಕಾಲೇಜು–360ರಲ್ಲಿ 72, ಬಾಪೂಜಿ ಪದವಿಪೂರ್ವಕಾಲೇಜು–456ರಲ್ಲಿ 87, ವಾಸವಿಪದವಿಪೂರ್ವಕಾಲೇಜು–456ರಲ್ಲಿ 104, ಬಿಎಂ ಸರ್ಕಾರಿ ಪ್ರೌಢಶಾಲೆ–240ರಲ್ಲಿ 44, ಎಚ್‌ಟಿಟಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆ–240ರಲ್ಲಿ38, ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು–600ರಲ್ಲಿ 133 ಒಟ್ಟು 478 ಪರೀಕ್ಷಾರ್ಥಿಗಳು ಪರೀಕ್ಷೆ ಗೈರಾಗಿದ್ದರು.

ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಬಿಗಿಯಾದ ಪೊಲೀಸ್ ಕಾವಲಿನ ಜೊತೆಗೆ ಅನಿವಾರ್ಯ ಸಂದರ್ಭದಲ್ಲಿ ನೆರವಾಗಲು ಆಸ್ಪತ್ರೆ ಸಿಬ್ಬಂದಿಯನ್ನು ಸಹ ನಿಯೋಜಿಸಲಾಗಿತ್ತು. ಬೆಳಗ್ಗೆ 10.30ರಿಂದ ಮಧ್ಯಾಹ್ನ 12.30ರತನಕ ಪರೀಕ್ಷೆಗಳು ಸುಗಮವಾಗಿ ನಡೆದಿದ್ದು, ಪರೀಕ್ಷಾ ಕೇಂದ್ರದ ಒಳಭಾಗಕ್ಕೆ ಯಾರ ಪ್ರವೇಶಕ್ಕೂ ಅವಕಾಶ ಮಾಡಿಕೊಡಲಿಲ್ಲ. ತಹಶೀಲ್ದಾರ್ ರೇಹಾನ್‌ಪಾಷ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಪರೀಕ್ಷಾ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಿದರು. ಇದೇ ಸಂದರ್ಭದಲ್ಲಿ ಸುಗಮವಾಗಿ ಪರೀಕ್ಷೆ ನಡೆಸಲು ಸಹಕಾರ ನೀಡಿದ ವಿವಿಧ ಶಾಲೆಗಳ ಶಿಕ್ಷಕರು, ಪರೀಕ್ಷಾ ಮೇಲುಸ್ತುವಾರಿ ಅಧಿಕಾರಿಗಳು, ಆರೋಗ್ಯ ಪೊಲೀಸ್ ಇಲಾಖೆಗೆ ಕೃತಜ್ಞತೆ ತಿಳಿಸಿದ್ಧಾರೆ.

# ಏನಿದು ಮಹಿಷ ದಸರಾ ಗಲಾಟೆ?

## ರಾಕ್ಷಸನಿಗೇಕೆ ದಸರೆಯ ಸಂಭ್ರಮ? ಪುರಾಣಗಳು ಹೇಳೋದೇನು?

» **ಮೈಸೂರು**

ಸಾಂಸ್ಕೃತಿಕ ರಾಜಧಾನಿ ಮೈಸೂರು ದಸರಾ ಎಂದರೆ ಅದೊಂದು ಸಂಭ್ರಮ, ಅಲ್ಲಿ ಒಂಬತ್ತು ದಿನಗಳ ಕಾಲ ನಡೆಯುವ ಆಚರಣೆ ಹಾಗೂ ವಿಶ್ವ ಪ್ರಸಿದ್ಧ ಜಂಬೂ ಸವಾರಿಯ ಸೊಬಗನ್ನು ಕಣ್ತುಂಬಿಸಿಕೊಳ್ಳಲು ಜಗತ್ತಿನಾದ್ಯಂತ ಜನರು ಪ್ರತಿವರ್ಷ ಬರುತ್ತಾರೆ.

ಆದರೆ ಕೆಲವು ವರ್ಷಗಳಿಂದ ದಸರಾ ಹೊತ್ತಲ್ಲಿ ಹೊಸದೊಂದು ವಿವಾದ ತಲೆ ಎತ್ತುತ್ತಿದೆ. ಅದು ಮಹಿಷ ದಸರಾ ವಾದವಾಗಿದೆ. ಆದರೆ, ಈ ವಾದಕ್ಕೆ ಪ್ರಬಲ ವಿರೋಧ ಕೂಡಾ ಇದೆ.

ಮಹಿಷಾಸುರನ ವಿಚಾರದಲ್ಲಿ ಇತಿಹಾಸ, ಪುರಾಣಗಳಲ್ಲಿ ಉಲ್ಲೇಖವಾದಂತೆ ಆತ ಒಬ್ಬ ರಾಕ್ಷಸ ಎಂದು ಹೇಳಲಾಗುತ್ತದೆ. ಹೀಗಿದ್ದಾಗ ಮಹಿಷ ದಸರಾ ಆಚರಣೆಗೆ ಯಾವ ಅರ್ಥ ಇದೆ ಎನ್ನುವುದು ಚಾಮುಂಡಿ ಭಕ್ತರ ವಾದವಾಗಿದೆ. ಈ ಮಹಿಷ ದಸರಾ ಇತಿಹಾಸ ಏನು? ಮಹಿಷ ದಸರಾ ಆಚರಣೆ ಹೇಗೆ? ಮಹಿಷ ದಸರಾ ಆಚರಣೆಗೆ ವಿರೋಧ ಏಕೆ? ಹಾಗೂ ಮಹಿಷ ದಸರಾ ಪರ ಇರುವವರ ವಾದವೇನು? ಈ ಎಲ್ಲ ವಿಚಾರಗಳ ಬಗ್ಗೆ ವಿವರವಾದ ವರದಿ ಇಲ್ಲಿದೆ...

**ಮಹಿಷ ದಸರಾ ಇತಿಹಾಸ ಏನು ಹೇಳುತ್ತದೆ?:** ಮೈಸೂರು ದಸರಾ ಆಚರಣೆ ಬಗ್ಗೆ ಬಹುತೇಕ ಎಲ್ಲರಿಗೂ ಗೊತ್ತಿರುವ ವಿಚಾರ, ಈ ಆಚರಣೆಗೆ ಇದಕ್ಕೆ ಐತಿಹಾಸಿಕ ಪ್ರಾಮುಖ್ಯತೆ ಇದೆ. ಆದರೆ ಈ ಮಹಿಷ ದಸರಾ ಅಂದರೆ ಏನು?

ಈ ವಿಚಾರ ಇತ್ತೀಚಿನ ವರ್ಷಗಳಲ್ಲಿ ಭಾರಿ ಸದ್ದು ಮಾಡುತ್ತಿದೆ. ಯಾಕೆ ಈ ಮಹಿಷ ದಸರಾ? ಇದರ ಇತಿಹಾಸ ಏನು ಎಂದು ಕೇಳುವ ಪ್ರಶ್ನೆಗೆ ಮಹಿಷ ದಸರಾ ಆಯೋಜಕರ ಉತ್ತರಿಸೋದು ಹೀಗೆ– ಕಳೆದ 50 ವರ್ಷಗಳಿಂದ ಮಹಿಷ ದಸರಾ ಆಚರಣೆ ಮಾಡುತ್ತಿದ್ದೇವೆ. ತಮ್ಮ ಆಚರಣೆ ಸಣ್ಣ ಪ್ರಮಾಣದಲ್ಲಿ ನಡೆಯುತ್ತಿತ್ತು ಅನ್ನೋದು ಮಹಿಷ ದಸರಾ ಆಯೋಜಕರ ವಾದ. ಮಹಿಷ ದಸರಾವನ್ನ ಮಂಟೇಲಿಂಗಯ್ಯ ಎಂಬುವರು ಮೊದಲು ಆರಂಭ ಮಾಡಿದ್ದರಂತೆ.

ಇದಾದ ಬಳಿಕ 2014 ರಿಂದ 2018ರವರೆಗೆ ಚಾಮುಂಡಿ ಬೆಟ್ಟದಲ್ಲೇ ನಾವು ಮಹಿಷ ದಸರಾ ಆಚರಣೆ ಮಾಡಿದ್ದೆವು. ಆದರೆ, ನಂತರ ಬಿಜೆಪಿ ಸರ್ಕಾರ ಬಂತು, ನಮಗೆ ಮಹಿಷ ದಸರಾ ಆಚರಣೆಗೆ ಅವಕಾಶ ಸಿಗಲಿಲ್ಲ. ಇಷ್ಟಾದರೂ ನಾವು ಮೈಸೂರು ನಗರದಲ್ಲೇ ಮಹಿಷ ದಸರಾ ಆಚರಣೆ ಮಾಡಿದೆವು ಅನ್ನೋದು ಈ ಕಾರ್ಯಕ್ರಮದ ಸಂಘಟಕರ ವಾದವಾಗಿದೆ. ನಮ್ಮ ಈ ಆಚರಣೆಗೆ ಸರ್ಕಾರ ಅವಕಾಶ ನೀಡಬೇಕು, ಇದು ನಮ್ಮ ಧಾರ್ಮಿಕ ಸ್ವಾತಂತ್ರ್ಯ ಎಂದು ಕಾರ್ಯಕ್ರಮದ ಆಯೋಜಕರು ಹೇಳುತ್ತಾರೆ.

**ಮಹಿಷನ ಬಗ್ಗೆ ಮಾರ್ಕಂಡೇಯ ಪುರಾಣಗಳು ಹೇಳೋದೇನು?:** ಮಹಿಷಾಸುರನಿಂದಲೇ ಮೈಸೂರು ಎನ್ನುವ ಹೆಸರು ಬಂದಿದೆ. ಚಾಮುಂಡಿ ಬೆಟ್ಟದಲ್ಲಿ ಇರುವ ಮಹಿಷಾಸುರನ ಪ್ರತಿಮೆ ಎಲ್ಲರ ಗಮನ ಸೆಳೆಯುತ್ತಿದೆ. ಮಹಿಷಾಸುರ ಮರ್ದಿನಿಯ ಕಥೆಯಂತೂ ಜನಜನಿತ..



### ಗಲಾಟೆ ನಡೆಯದಂತೆ ಕಾರ್ಯಕ್ರಮಕ್ಕೆ ಅವಕಾಶ: ಮಹಿಷ ದಸರಾದಲ್ಲಿ ಸಿಎಂ ಭಾಗಿ

ಮಹಿಷ ದಸರಾ ಕಾರ್ಯಕ್ರಮದಲ್ಲಿ ಸಿಎಂ ಸೇರಿ ಸಚಿವರುಗಳು ಭಾಗಿಯಾಗಿದ್ದಾರೆ.



ಮೈಸೂರಿನ ಕಲಾ ಮಂದಿರದಲ್ಲಿ ಕಾರ್ಯಕ್ರಮ ನಡೆಯುತ್ತಿದ್ದು, ಮೈಸೂರಿನ ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘದಿಂದ ಉದ್ಘಾಟನಾ ಕಾರ್ಯಕ್ರಮ ನಡೆಯಿತು.ಮೈಸೂರಿನ ಟೌನ್ ಹಾಲ್ ಆವರಣದಲ್ಲಿ ನಡೆಯುತ್ತಿರುವ ಸಮಾವೇಶವನ್ನು ಪ್ರಗತಿಪರ ಚಿಂತಕ ಯೋಗೇಶ್ ಮಾಸ್ಟರ್ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟನೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಉರಿಲಿಂಗಿ ಪೆದ್ದಿ ಮಠದ ಜ್ಞಾನ ಪ್ರಕಾಶ ಸ್ವಾಮಿಜಿ, ಪ್ರೊ.ಭಗವಾನ್, ನಂಜರಾಜೇಅರಸು, ಬೋಧಿಸತ್ತ ಬಂತೇಜಿ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಬಂದ ಮಹಿಷ ಅಭಿಮಾನಿಗಳು ಭಾಗಿಯಾಗಿದ್ದಾರೆ.

ಮೊದಲಿಗೆ ಈ ಪುರಾಣ ಕಥೆ ಏನು ಅಂತಾ ತಿಳಿದುಕೊಂಡರೆ ಮಹಿಷ ದಸರಾ ಆಚರಣೆಗೆ ವಿರೋಧ ಏಕೆ ಅನ್ನೋದು ತಾನಾಗಿಯೇ ಅರ್ಥವಾಗುತ್ತದೆ.

ಮಹಿಷ ಅಂದ್ರೆ ಸಂಸ್ಕೃತದಲ್ಲಿ ಕೋಣ ಅಂತಾ ಅರ್ಥ. ಮಹಿಷಾಸುರನನ್ನು ಕನ್ನಡದಲ್ಲಿ ಕೋಣ ರಾಕ್ಷಸ ಎಂದು ಅನುವಾದ ಮಾಡಬಹುದು. ಈತ ದೇವತೆಗಳವಿರುದ್ಧಯುದ್ಧಮಾಡಿದ್ದನಂತೆ. ತನ್ನನ್ನ ಯಾವುದೇ ಮನುಷ್ಯ ಕೊಲ್ಲೋಕೆ ಸಾಧ್ಯವೇ ಇಲ್ಲದಂಥಾ ವರವನ್ನೂ ಪಡೆದಿದ್ದನಂತೆ. ಈತನ ಆರ್ಭಟಕ್ಕೆ ಇಂದ್ರ ಸೇರಿದಂತೆ ಎಲ್ಲ ದೇವತೆಗಳೂ ಸೋತು ಹೋದರಂತೆ. ನಂತರ ಈ ಎಲ್ಲಾ ದೇವತೆಗಳೂ ಪರ್ವತದಲ್ಲಿ ಒಂದಾದರು. ಎಲ್ಲ ದೈವಿಕ ಶಕ್ತಿಗಳೂ ಒಂದಾದ ಬಳಿಕ ದುರ್ಗಾ ದೇವಿಯ ಅವತಾರವಾಯಿತು. ದುರ್ಗೆಯು ಸಿಂಹದ ಮೇಲೆ ಸವಾರಿ ಮಾಡುತ್ತಾ ಬಂದು ತನ್ನ ತ್ರಿಷೂಲದಿಂದ ಮಹಿಷಾಸುರನನ್ನು ಕೊಂದಳು.

ಹೀಗಾಗಿ ಆಕೆಗೆ ಮಹಿಷಾಸುರ ಮರ್ದಿನಿ ಎನ್ನುವ ಹೆಸರು ಬಂದಿತು. ಆಕೆಯೇ ಚಾಮುಂಡಿ ದೇವಿ.. ಇಂದಿಗೂ ಚಾಮುಂಡಿ ಬೆಟ್ಟದಲ್ಲಿ ಆಕೆ ನೆಲೆಯಾಗಿದ್ದಾಳೆ ಅನ್ನೋದು ಪುರಾಣ ಕಥೆ.. ಮಾರ್ಕಂಡೇಯ ಪುರಾಣದಲ್ಲಿ ಈ ಕಥೆ ಇದೆ.ಈ ಕಥೆಯ ಪ್ರಕಾರ ಮಹಿಷಾಸುರ ಒಬ್ಬ ರಾಕ್ಷಸ.. ಇಂತಹ ರಾಕ್ಷಸನನ್ನು ಪೂಜೆ ಮಾಡೋದು ಏಕೆ ಅನ್ನೋದು ಬಿಜೆಪಿ ನಾಯಕರ ಪ್ರಶ್ನೆ. ಮಹಿಷ ದಸರಾ ಆಚರಣೆ ಮಾಡೋದು ಚಾಮುಂಡಿ ತಾಯಿಗೆ ಮಾಡುವ ಅವಮಾನ ಎಂದು ಸಂಸದ ಪ್ರತಾಪ್ ಸಿಂಹ ಹೇಳಿದ್ದಾರೆ. ಮಹಿಷಾಸುರ ಯಾವಾಗ ಮೂಲ ನಿವಾಸಿಗಳ ದೇವರಾಗಿದ್ದ ಎಂದು ಪ್ರಶ್ನಿಸಿರುವ ಪ್ರತಾಪ್ ಸಿಂಹ, ದೆವ್ವ ಯಾವಾಗ ದೇವರಾಯ್ತು ಎನ್ನುವುದು ಪ್ರತಾಪ್ ಸಿಂಹ ಪ್ರಶ್ನೆಯಾಗಿದೆ.

**ಮಹಿಷ ಪರ ವಾದ ಏನು?:** ಮಹಿಷ ಅಸುರ ಅಲ್ಲ ಅನ್ನೋದು ಮಹಿಷ ದಸರ ಪರ ಇರುವವರ ವಾದ. ಭಾರತಕ್ಕೆ ಬಂದ ಆರ್ಯರು ಇಲ್ಲಿ ಇದ್ದ ಮೂಲ ನಿವಾಸಿಗಳನ್ನು ಅಸುರರು ಎಂದು ಕಥೆ ಕಟ್ಟಿದರು. ಮಹಿಷಾಸುರನ ಬಗ್ಗೆಯೂ ಇದೇ ರೀತಿ ಕಥೆ ಕಟ್ಟಿದ್ದಾರೆ ಅನ್ನೋದು ಪ್ರಗತಿಪರರ ವಾದ. ಮಹಿಷ ಮತ್ತು ಚಾಮುಂಡಿ ಭೌಗೋಳಿಕವಾಗಿ ಎಲ್ಲೋ ಒಂದು ಕಡೆ ಹುಟ್ಟಿ ಬೆಳೆದವರಲ್ಲ, ಒಂದೇ ಕಾಲ ಘಟ್ಟದವರಲ್ಲ ಅನ್ನೋದು ಪ್ರಗತಿಪರರ ವಾದ. ಮಹಿಷ ಚಾರಿತ್ರಿಕ ಪುರುಷ, ಆದರೆ, ಚಾಮುಂಡಿ ಪುರಾಣದ ಕಥೆ ಎಂದು ಚಾಮುಂಡಿ ದೇವಿಯ ಅಸ್ತಿತ್ವಕ್ಕೆ ಸವಾಲು ಹಾಕುತ್ತಾರೆ. ಪುರಾಣಗಳು ಕಟ್ಟುಕತೆಗಳು, ಆದರೆ ಇತಿಹಾಸ ಸತ್ಯದ ಕತೆ, ನೀವು ದಸರಾ ಮಾಡಿ, ನಮಗೆ ಮಹಿಷ ದಸರಾ ಮಾಡಲು ಬಿಡಿ ಎನ್ನುವುದು ಪ್ರಗತಿಪರರ ವಾದ. ನೀವು ಚಾಮುಂಡಿ ದೇವಿಯನ್ನು ಪೂಜಿಸಿ, ನಾವು ಮಹಿಷ ದಸರಾ ಮಾಡುತ್ತೇವೆ. ಈ ದೇಶದ ಮೂಲ ನಿವಾಸಿಗಳ ಸಂಸ್ಕೃತಿಯನ್ನು ಗೌರವಿಸಿ ಎಂದು ಅವರುಗಳು ಹೇಳುತ್ತಾರೆ.

**ಕಾಂಗ್ರೆಸ್ ಅಧಿಕಾರ ಅವಧಿಯಲ್ಲಿ ಮಹಿಷ ದಸರಾಗೆ ಪ್ರೋತ್ಸಾಹ:** ಈ ಹಿಂದೆ ಸಂಸದರಾಗಿದ್ದ ವೇಳೆಯೂ ಪ್ರತಾಪ್ ಸಿಂಹ ಅವರು ಮಹಿಷಾ ದಸರಾಗೆ ವ್ಯಾಪಕ ವಿರೋಧ ವ್ಯಕ್ತಪಡಿಸಿದ್ದರು. ರಾಜ್ಯದಲ್ಲಿ ಬಿಜೆಪಿ ಆಡಳಿತ ಇದ್ದ ಸಂದರ್ಭದಲ್ಲಿ ಮಹಿಷ ದಸರಾ ಆಚರಣೆಗೆ ಅನುಮತಿ ನೀಡಿರಲಿಲ್ಲ. ಆದರೆ ಕಳೆದ ವರ್ಷ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಮಹಿಷಾ ದಸರಾಗೆ ಮತ್ತೆ ಅನುಮತಿ ನೀಡುತ್ತಿದೆ. 2014–19ರವರೆಗೂ ಮಹಿಷ ದಸರಾಗೆ ಅವಕಾಸ ನೀಡಲಾಗಿತ್ತು.

ಕಳೆದ ವರ್ಷವೂ ಚಾಮುಂಡಿ ಬೆಟ್ಟದಲ್ಲೇ ಮಹಿಷಾ ದಸರಾ ಆಚರಣೆಗೆ ಸಿದ್ಧತೆಗಳು ನಡೆದಿದ್ದವು. ಆ ಸಂದರ್ಭದಲ್ಲಿ ಸಂಸದರಾಗಿದ್ದ ಪ್ರತಾಪ್ ಸಿಂಹ ನೇತೃತ್ವದ ಬಿಜೆಪಿ ಕಾರ್ಯಕರ್ತರ ತಂಡ ಚಾಮುಂಡಿ ಬೆಟ್ಟ ಚಲೋ ಹಮ್ಮಿಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಎಚ್ಚೆತ್ತುಕೊಂಡ ಜಿಲ್ಲಾಡಳಿತವು ಎರಡೂ ಕಡೆಯವರಿಗೆ ಚಾಮುಂಡಿ ಬೆಟ್ಟ ಪ್ರವೇಶಕ್ಕೆ ಅನುಮತಿ ನೀಡಲಿಲ್ಲ. ಹೀಗಾಗಿ ಪುರಭವನದಲ್ಲಿ ಮಹಿಷಾ ದಸರಾ ಆಚರಣೆಯ ವೇದಿಕೆ ಕಾರ್ಯಕ್ರಮ ಮಾತ್ರ ನಡೆದಿತ್ತು.

**ಮಹಿಷ ದಸರಾ ಮಾಡುವವರಿಗೆ ಪ್ರತಾಪ್ ಸಿಂಹ ಚಾಲೇಂಜ್:** ಮಹಿಷ ದಸರಾ ಆಯೋಜಕರು ಕಾರ್ಯಕ್ರಮದ ಕುರಿತು ಸುದ್ದಿಗೋಷ್ಠಿ ನಡೆಸಿದ ಬಳಿಕ ಮಾಜಿ ಸಂಸದ ಪ್ರತಾಪ್ ಸಿಂಹ್ ಅವರು ತಮ್ಮ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದು, ಬೆಟ್ಟದಲ್ಲಿ ಮಹಿಷನಿಗೆ ಪುಷ್ಪಾರ್ಚನೆ?! ಬನ್ನಿ,ನೋಡೇ ಬಿಡೋಣ ಎಂದು ಸವಾಲು ಹಾಕಿದ್ದಾರೆ. ಮಹಿಷನೆಂಬ ದೆವ್ವವನ್ನು ದೇವರು ಮಾಡಲು, ದೇವಿಯನ್ನು ದೆವ್ವಮಾಡಲು ಇವರು ಹೊರಟಿದ್ದಾರೆ? ಇನ್ನೊಬ್ಬರ ನಂಬಿಕೆಗೆ, ಭಾವನೆಗೆ ನೋವುಂಟು ಮಾಡಲು ಸಂವಿಧಾನದ ಯಾವ ಭಾಗದಲ್ಲಿ ಅವಕಾಶವಿದೆ? ಮಹಿಷನ ಫೋಟೋವನ್ನು ಮನೆಯಲ್ಲಿಟ್ಟುಕೊಂಡು, ನಿನ್ನಂಥ ಮಗನನ್ನು ಕೊಡು ಎಂದು ನೀವು ನಿತ್ಯ ಆರಾಧನೆ ಮಾಡಲು ನಮ್ಮ ತಕರಾರು ಏನೂ ಇಲ್ಲ! ಎಂದು ಮಹಿಷ ದಸರಾ ಆಯೋಜಕರಿಗೆ ತಿರುಗೇಟು ನೀಡಿದ್ದಾರೆ.

**ಮಹಿಷ ದಸರಾ ಮೆರವಣಿಗೆಗಳಿಗೆ ಬ್ರೇಕ್!:** ಪ್ರತಾಪ್ ಸಿಂಹ ಅವರ ಈ ಹೇಳಿಕೆ ಬೆನ್ನಲ್ಲೇ ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಅವರು ಮಹಿಷ ಮಂಡಲೋತ್ಸವ / ಮಹಿಷ ದಸರಾದ ಪರ – ವಿರೋಧವಾಗಿ ನಡೆಸುವ ಈ ಕೆಳಕಂಡವುಗಳನ್ನು ನಿಷೇಧಿಸಿ, ಕಲಂ 163 ಬಿ.ಎನ್.ಎಸ್.ಎಸ್ ಕಾಯ್ದೆ–2023 ರೀತ್ಯ ನಿಷೇಧಾಜ್ಞೆಯನ್ನು ಹೊರಡಿಸಲಾಗಿದೆ.

ಈ ಸಂದರ್ಭದಲ್ಲಿ ಯಾವುದೇ ಮೆರವಣಿಗೆ, ಪ್ರತಿಭಟನೆ ಬೈಕ್ □□ಯಾಲಿ ನಡೆಸುವುದು, ಪರ – ವಿರೋಧ ಘೋಷಣೆ ಕೂಗುವುದು, ಪಟಾಕಿ ಸಿಡಿಸಿ ಸಂಭ್ರಮಾಚರಣೆ ಆಚರಿಸುವುದು, 05 ಜನರಿಗಿಂತ ಹೆಚ್ಚಿನ ಜನ ಗುಂಪು ಸೇರುವುದು, ಯಾವುದೇ ಬಹಿರಂಗ ಸಭೆ ಸಮಾರಂಭಗಳನ್ನು ನಡೆಸುವುದು ಹಾಗೂ ಯಾವುದೇ ಸಾರ್ವಜನಿಕ ಸ್ಥಳದಲ್ಲಿ ಪ್ರಚಾರ, ಧ್ವನಿವರ್ಧಕ ಬಳಸುವುದು, ಫ್ಲೆಕ್ಸ್, ಬ್ಯಾನರ್ ಅಳವಡಿಸುವುದು,ಕರಪತ್ರಗಳನ್ನು ಹಂಚುವುದು, ಮೂರ್ತಿ ಮೆರವಣಿಗೆ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿರುತ್ತದೆ. ಯಾವುದೇ ಸಂಘಟನೆ ಅಥವಾ ಸಾರ್ವಜನಿಕರು ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಹಾಗೂ ಸಭೆ – ಸಮಾರಂಭ ಮೆರವಣಿಗೆ, ಪ್ರತಿಭಟನೆ, □□ಯಾಲಿ ನಡೆಸಲು ಪ್ರಯತ್ನಿಸಿದಲ್ಲಿ ಅಲ್ಲಿ ಸೇರಿರುವ ಜನರ ಕೂಟವನ್ನು ಅಕ್ರಮ ಕೂಟವೆಂದು ಪರಿಗಣಿಸಿ, ಆದೇಶ ಉಲ್ಲಂಘನೆ ಕುರಿತಂತೆ ಕಾನೂನು ಕ್ರಮಕೈಗೊಳ್ಳಲಾಗುತ್ತದೆ ಎಂದು ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಆದೇಶ ಹೊರಡಿಸಿದ್ದಾರೆ.

**ದಸರಾ ಆಚರಣೆಗೆ ಬೆದರಿಕೆ ಹಾಕಿದ ಮಾಜಿ ಮೇಯರ್ ಪುರುಷೋತ್ತಮ್:** ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಮೇಯರ್ ಪುರುಷೋತ್ತಮ್ ಅವರು, ಇವತ್ತಿನ ಕಾರ್ಯಕ್ರಮ ಬಹಳ ದೊಡ್ಡ ಮಟ್ಟದಲ್ಲಿ ಆಗಬೇಕಿತ್ತು, ಆದರೆ ನಮ್ಮನ್ನಾಳುವ ಸರ್ಕಾರ ಇದಕ್ಕೆ ಅವಕಾಶ ಕೊಟ್ಟಿಲ್ಲ. ಇಂದಿನ ಸರ್ಕಾರ ಅಧಿಕಾರಕ್ಕೆ ಬರಲು ಯಾವ ಸಮುದಾಯ ಹೆಚ್ಚು ಕಾರಣವಾಗಿದೆಯೋ ಆ ಸಮುದಾಯ ಮಾಡುವ ಕಾರ್ಯಕ್ರಮಕ್ಕೆ ಅವಕಾಶ ನೀಡಿಲ್ಲ. ಇದು ಇಂದಿನ ಸರ್ಕಾರ ನಮ್ಮ ಸಮುದಾಯದಕ್ಕೆ ಮಾಡಿದ ದ್ರೋಹ ಜಿಲ್ಲಾಡಳಿತ ಗುಲಾಮಗಿರಿಯನ್ನು ತೋರುತ್ತಿದೆ. ಕಾರ್ಯಕ್ರಮ ದೊಡ್ಡ ಮಟ್ಟದಲ್ಲಿ ನಡೆಸಲು ಅವಕಾಶ ಕೊಡದ ಸರ್ಕಾರದ ವಿರುದ್ಧ ಕಿಡಿಕಾರಿದರು.

ಜಿಲ್ಲಾಡಳಿತಕ್ಕೆ ನಾನು ಸವಾಲಾಕುತ್ತೇನೆ, ನೀವು ಹೇಗೆ ದಸರಾ ಉದ್ಘಾಟನೆ ಮಾಡುತ್ತೀರಾ ನಾವು ನೋಡುತ್ತೇವೆ. ದಸರಾ ಉದ್ಘಾಟನೆಗೆ ಅಡ್ಡಿಪಡಿಸುತ್ತೇವೆ, ಇದಕ್ಕೆಪ್ರಾಣ ಹೋದರು ಪರವಾಗಿಲ್ಲ.ನಮ್ಮ ತಾಳ್ಮೆಯನ್ನು ಪರೀಕ್ಷೆ ಮಾಡುತ್ತಿದ್ದೀರಾ.? ದಸರಾ ಆಚರಣೆ ತಡೆಯುತ್ತೇವೆ. ನೀವು ತಡೆಯಿರಿ ಕಾರು ಬಸ್ಸು ಎಲ್ಲಾ ಕಡೆ ತಡೆ ಹಾಕುತ್ತೇವೆ ಎಂದು ಮಾಜಿ ಮೇಯರ್ ಪುರುಷೋತ್ತಮ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

**ಪ್ರಮುಖ ಸುದ್ದಿ**

# ಭಗತ್ ಸಿಂಗ್ ಇಂದಿನ ಯುವಜನತೆಗೆ ಆದರ್ಶ

» **ಚಿತ್ರದುರ್ಗ**

ಸ್ವಾತಂತ್ರ್ಯ ಸಂಗ್ರಾಮದ ಕ್ರಾಂತಿಕಾರಿ ಹೋರಾಟಗಾರರಾಗಿರುವ ಧೀರಹುತಾತ್ಮ ಭಗತ್ ಸಿಂಗ್‌ರವರು ಇಂದಿನ ಯುವಜನತೆಗೆ ಆದರ್ಶವಾಗಿದ್ದಾರೆ. ಅವರ ವಿಚಾರಧಾರೆಗಳು ಇಂದಿಗೂ ನಮ್ಮ ಸಮಾಜವನ್ನು ಮುನ್ನಡೆಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ." ಎಂದು ಎಐಯುಟಿಯುಸಿ ಕಾರ್ಮಿಕ ಸಂಘಟನೆ ಮುಖಂಡರಾದ ರವಿಕುಮಾರ್ ತಿಳಿಸಿದರು.




ಚಿತ್ರದುರ್ಗದಲ್ಲಿ ಎಐಡಿಎಸ್‌ಓ–ಎಐಡಿವೈಓವತಿಯಿಂದ ಸ್ವತಂತ್ರ ಸಂಗ್ರಾಮದ ಕ್ರಾಂತಿಕಾರಿ ಹೋರಾಟಗಾರ ಭಗತ್ ಸಿಂಗ್‌ರ 117ನೇ ಜನ್ಮದಿನವನ್ನು ನಗರದ ಡಿ.ಸಿ ವೃತ್ತದ ಬಳಿ ಇರುವ ಭಗತ್ ಸಿಂಗ್ ಪಾರ್ಕ್‌ನ ಬಳಿ ನಡೆದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು "ಭಗತ್ ಸಿಂಗ್‌ರವರ ಇಂಕ್ವಿಲಾಬ್ ಜಿಂದಾಬಾದ್ ಅಂದರೆ ಕ್ರಾಂತಿ ಚಿರಾಯುವಾಗಲಿ ಎಂಬ ಘೋಷಣೆಯು ಇಂದಿಗೂ ಸಹ ಆಳ್ವಿಕರ ಎಲ್ಲ ಶೋಷಣೆಯ ವಿರುದ್ಧ ಯುವಕರ ಮನಸ್ಸನ್ನು ಎಚ್ಚರಿಸುತ್ತವೆ. ದೇಶದ ಎಲ್ಲಾ ಸಂಪತ್ತಿನ ಒಡೆತನವನ್ನು ಬಂಡವಾಳಗಾರರು ತಮ್ಮ ಕಪಿ ಮುಷ್ಟಿಯಲ್ಲಿ ಇಟ್ಟುಕೊಂಡಿದ್ದಾರೆ. ಇದೇ ನಮ್ಮ ದೇಶದ ಬಡ ರೈತರ, ಕಾರ್ಮಿಕರ, ನವ ಯುವಕರ ಬೆಳವಣಿಗೆಗೆ ದೊಡ್ಡ ತೊಡಕಾಗಿದೆ ಎಂಬುದನ್ನು ಭಗತ್‌ಸಿಂಗ್ ಸ್ಪಷ್ಟವಾಗಿ ಗ್ರಹಿಸಿದ್ದರು. ಅದಕ್ಕಾಗಿ ಮಾನವನಿಂದ ಮಾನವನ ಮೇಲೆ ಜರುಗುವ ಶೋಷಣೆಯನ್ನು ತೊಲಗಿಸಿ ನೊಂದ ಜನ ಗೌರವದಿಂದ ತಲೆಯೆತ್ತಿ ಜೀವಿಸುವ ಸಮಾಜವಾದಿ ಸಮಾಜವೆ ಗುರಿ ಹೊಂದಿದ್ದರು. ಆದರೆ ಅವರ ಕನಸು ಇಂದಿಗೂ ನನಸಾಗಿರುವುದಿಲ್ಲ. ಸ್ವಾತಂತ್ರ್ಯ ನಂತರ ಆಳ್ವಿಕೆಗೆ ಬಂದ ಎಲ್ಲ ಸರ್ಕಾರಗಳು ಅವರ ವಿಚಾರಧಾರೆಗಳನ್ನು ಯತ್ನಿಸಿವೆ. ದೇಶ ಸ್ವತಂತ್ರವಾಗಿ ಏಳು ದಶಕಗಳು ಕಳೆದಿದ್ದರೂ ಬಡವರು ಶ್ರೀಮಂತರ ಮಧ್ಯ ಅಂತರ ಕಡಿಮೆಯಾಗಿಲ್ಲ. ರೈತ ಕಾರ್ಮಿಕರ ಬದುಕು ಇನ್ನು ಅತಂತ್ರವಾಗಿಯೇ ಉಳಿದಿದೆ. ಉದ್ಯೋಗ, ಆರೋಗ್ಯ ವ್ಯವಸ್ಥೆ ಮತ್ತು ಶಿಕ್ಷಣದಲ್ಲಿ ಗಂಭೀರವಾದ ಕೊರತೆಗಳನ್ನು ಎದುರಿಸುತ್ತಿದ್ದೇವೆ. ಇಂದು ಭಾರತ ಅಪಾರವಾದ ನೈಸರ್ಗಿಕ ಸಂಪತ್ತನ್ನು ಹೊಂದಿದ್ದರು ಸಹ ಆಳ್ವಿಕ ಸರ್ಕಾರಗಳು ಮೂಲಸೌಕರ್ಯಗಳನ್ನು ಕೊಡುವಲ್ಲಿಯೂ ವಿಫಲವಾಗಿ ಕೇವಲ ನೆಪ ನೀಡುತ್ತಿವೆ. ಬ್ರಿಟಿಷರ ನಂತರ ಬಂದ ಎಲ್ಲಾ ಆಳ್ವಿಕರು ಈ ಬಂಡವಾಳಿಗರ ಸೇವೆಗೆ ಬದ್ಧರಾಗಿ ನಿಂತಿದ್ದಾರೆ. 'ಆದರೆ ಭಗತ್‌ಸಿಂಗರೇ ನುಡಿದಂತೆ "ವ್ಯಕ್ತಿಯನ್ನು ಕೊಲ್ಲಬಹುದೇ ಹೊರತು, ಅವನ ವಿಚಾರಗಳನ್ನಲ್ಲ" ಇವರ ವಿಚಾರಧಾರೆಯನ್ನು ಸಂಪೂರ್ಣವಾಗಿ ಮುಚ್ಚಿಡಲು ಸಾಧ್ಯವಿಲ್ಲ. ನಮ್ಮ ವಿದ್ಯಾರ್ಥಿ ಸಂಘಟನೆ ಮತ್ತು ಯುವಜನ ಸಂಘಟನೆಗಳು ದೇಶದಾದ್ಯಂತ ಇಂದು ಭಗತ್ ಸಿಂಗ್‌ರ ಜನ್ಮದಿನವನ್ನು ಅತ್ಯಂತ ಗೌರವದಿಂದ ಆಚರಿಸಿ ಯುವಜನರಿಗೆ ಅವರ ವಿಚಾರಧಾರೆಯನ್ನ ತಲುಪಿಸುವ ಪ್ರಯತ್ನ ಮಾಡಲಾಗುತ್ತಿದೆ' ಎಂದರು.

ಓನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಎಐಡಿಎಸ್‌ಓ ಜಿಲ್ಲಾ ಮುಖಂಡ ಕೆ.ಈರಣ್ಣ ಅವರು "ಜಾತಿ – ಧರ್ಮಗಳ ಗಡಿಯನ್ನು ಮೀರಿ ಎಲ್ಲರೂ ಭಾರತವೆಂಬ ಒಂದೇ ಸೂರಿನಡಿಯಲ್ಲಿ ಎಲ್ಲರೂ ನೆಮ್ಮದಿಯಿಂದ ಬದುಕುವಂತಾಗಬೇಕು, ಬ್ರಿಟಿಷ್ ಸಾಮ್ರಾಜ್ಯಶಾಹಿಗಳ ವಿರುದ್ಧ ರಾಜಿರಹಿತ ಹೋರಾಟ ನಡೆಸಿ, ನಗುನಗುತ್ತಾ ಗಲ್ಲಂಬವನ್ನೇರಿದವರು ಭಗತ್ ಸಿಂಗ್. ಈ ಸಮಾಜದಲ್ಲಿ ಶಿಕ್ಷಣ ವ್ಯಾಪಾರೀಕರಣ, ನಿರುದ್ಯೋಗ, ಜಾತಿ ಹಾಗೂ ಕೋಮುವಾದದ ವಿರುದ್ಧ ಧ್ವನಿ ಎತ್ತಲು ಅವರ ವಿಚಾರಗಳು ನಮಗೆ ಸ್ಫೂರ್ತಿಯಾಗಿವೆ. ಭಗತ್ ಸಿಂಗ್‌ರ ಜೀವನ ಸಂಘರ್ಷ ಹಾಗೂ ವಿಚಾರಗಳನ್ನು ಸ್ಫೂರ್ತಿಯಾಗಿಸಿಕೊಂಡು ಅವರ ಕನಸಿನ ಸಮಾಜವಾದಿ ಭಾರತ ಕಟ್ಟಲು ವಿದ್ಯಾರ್ಥಿಗಳು ಸಂಕಲ್ಪವನ್ನು ತೆಗೆದುಕೊಳ್ಳಬೇಕು ಶಿಕ್ಷಣ – ಸಂಸ್ಕೃತಿ – ಮಾನವತೆ ಉಳಿಸಲು ವಿದ್ಯಾರ್ಥಿ–ಯುವಜನತೆ ಒಂದಾಗಬೇಕು" ಎಂದು ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಎಐಡಿಎಸ್‌ಓ ಸದಸ್ಯರಾದ ಹೇಮಂತ್, ಪವನ್, ನಿಶಾನ್ ಎಐಡಿವೈಓನ ನಿಂಗರಾಜ್, ಎಐಎಂಎಸ್‌ಎಸ್ ಮಹಿಳಾ ಸಂಘಟನೆಯಿಂದ ಸುಜಾತ, ಮತ್ತು ನಗರಸಭೆಯ ನೌಕರರಾದ ಶಿವು ಮತ್ತು ಕೃಷ್ಣ ಅನೇಕ ವಿದ್ಯಾರ್ಥಿ–ಯುವಜನರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಓನಕೆ ಓಬವ್ವ ಜಿಲ್ಲಾ ಕ್ರೀಡಾಂಗಣ ಮತ್ತು ಇನ್ನಿತರೆ ಶಾಲಾ ಕಾಲೇಜು, ಹಾಸ್ಟೆಲ್‌ಗಳಲ್ಲಿ ಭಗತ್ ಸಿಂಗ್‌ರವರಿಗೆ ಗೌರವ ಸಲ್ಲಿಸುವ ಮೂಲಕ ಆಚರಿಸಲಾಯಿತು..





# ಆದರ್ಶ ಶಿಕ್ಷಕರಾಗಿ ಕುವೆಂಪು

ಬ್ರಿಟಿಷರು ನಮ್ಮನ್ನು ನೂರಾರು ವರ್ಷ ಆಳಿದರಾದರೂ ಅವರ ಕೆಲವು ಆಲೋಚನೆಗಳು ಶ್ಲಾಘನೀಯವಾದವು ಮತ್ತು ನಾವು ಇಂದು ಎಂದೆಂದೂ ನೆನೆಪಿಟ್ಟುಕೊಳ್ಳ ಬೇಕಾದಂತವುಗಳು ಒಂದು ವೇಳೆ ಬ್ರಿಟಿಷರು ನಮ್ಮ ದೇಶಕ್ಕೆ ಬರಲಿಲ್ಲವೆಂದಿದ್ದರೆ ನಾವು ಇನ್ನೂ ಸಹ ಬದಲಾಗುತ್ತಿರಲ್ಲವೇನೋ ಎಂದು ಭಾಸವಾಗುತ್ತದೆ ಕಾರಣ ಬ್ರಿಟಿಷ್‌ರ ಶಿಕ್ಷಣ ನೀತಿಗಳು ವೈಚಾರಿಕ–ವೈಜ್ಞಾನಿಕ ಆಲೋಚನೆಗಳು ನಮ್ಮಲ್ಲಿ ಹೊಸತನ್ನು ಯೋಚಿಸಲು ಅನುವು ಮಾಡಿಕೊಟ್ಟಿರುವುದಲ್ಲದೆ ತಾರತಮ್ಯ, ದೌರ್ಜನ್ಯದ ವಿರುದ್ಧ ಬುಗಿಲೇಳುವ ಮನೋಧರ್ಮವನ್ನು ಕಲಿಸುವುದರ ಜೊತೆಗೆ ಹಲವು ಕಂದಚಾರಗಳನ್ನು ಬೇರು ಸಮೇತ ಕಿತ್ತೆಸೆಯುವ ಕಾರ್ಯಗಳನ್ನು ಕೈಗೊಳ್ಳಲು ಶಿಕ್ಷಣದಿಂದ ಮಾತ್ರ ಸಾಧ್ಯವಾಗುವುದೆಂದು ನಮಗೆ ಮನವರಿಕೆ ಮಾಡಿಕೊಟ್ಟಿದ್ದಾರೆ. ಹೌದು, ಒಂದು ನವ ಸಮಾಜವು ಸಾಮಾಜಿಕವಾಗಿ, ಆರ್ಥಿವಾಗಿ, ಶೈಕ್ಷಣಿಕವಾಗಿ, ನೈತಿಕವಾಗಿ ಸದೃಢದಿಂದ ನಿರ್ಮಾಣವಾಗಬೇಕಾದರೆ ಅದು ಶಿಕ್ಷಣದಿಂದಲೇ ಹೊರತು ಯಾವುದೇ ಅನ್ಯ ಮೂಲಗಳಿಂದ ಸಾಧ್ಯವಾಗುವುದಿಲ್ಲ. ಶಿಕ್ಷಣ ಅರಿವನ್ನು ಮೂಡಿಸುತ್ತದೆ, ಅರಿವು ಒಳ್ಳೆಯದನ್ನೇ ತೋರಿಸುತ್ತದೆ ಹಾಗಾಗಿ ನಮ್ಮ ರಾಷ್ಟ್ರ ಕವಿ ಕುವೆಂಪು ಅವರು ಒಬ್ಬ ಶಿಕ್ಷಕರಾಗಿ ತಮ್ಮ ಬರವಣಿಗೆಯಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಿದ್ದು ಸಮ–ಸಮಾಜದ ಕಲ್ಪನೆಯನ್ನು ಶಿಕ್ಷಣದ ಮೂಲಕ ಸಮಾಜಕ್ಕೆ ಕೊಡುಗೆಯಾಗಿ ನೀಡಿದ್ದಾರೆ.

1929ರಲ್ಲಿ ಶ್ರೀ ಕುವೆಂಪು ಅವರು ಎಂ.ಎ. ಪರೀಕ್ಷೆಯಲ್ಲಿ ತೇರ್ಗಡೆಯಾದರು. ಅವರಿಗೆ ಮಹಾರಾಜಾ ಕಾಲೇಜಿನಲ್ಲಿ ಕನ್ನಡ ಪ್ರಾಧ್ಯಪಕರ ಹುದ್ದೆ ದೊರೆಯಿತು. ಹಾಗೆ ಅವರು ನೌಕರಿ ಮಾಡುವಾಗ ಅವರ ಸ್ವತಂತ್ರ ಪ್ರಾಮಾಣಿಕ ಪ್ರವೃತ್ತಿಯನ್ನು ಪರೀಕ್ಷಿಸುವಂಥ ಅನೇಕ ಘಟನೆಗಳು ನಡೆದವು. 1936ರಲ್ಲಿ "ಮೈಸೂರು ಸಂಸ್ಥಾನದ ಬಹು ಪ್ರತಿಷ್ಠಿತ ವ್ಯಕ್ತಿಯೊಬ್ಬರ ಮಗ ಇಂಟರ್ಮೀಡಿಯಟ್ ಪರೀಕ್ಷೆಗೆ ಕುಳಿತಿದ್ದರು. ಕುವೆಂಪು, ಅವರ ಕನ್ನಡ ಪತ್ರಿಕೆಗೆ ಬೆಲೆಕಟ್ಟಿ, ಆ ಉತ್ತರಗಳಿಗೆ ನ್ಯಾಯವಾಗಿ ಸಲ್ಲಬೇಕಾಗಿದ್ದ ಅಂಕಗಳನ್ನು ಕೊಟ್ಟಿದ್ದರು. ಆ ಅಂಕಗಳಿಂದ ವಿದ್ಯಾರ್ಥಿ ಫೇಲಾಗುತ್ತಿದ್ದನೋ ಏನೋ ಕೊಟ್ಟಿದ್ದ ಅಂಕಗಳು ಸಾಲದವೆಂದೂ, ಇನ್ನಷ್ಟು ಕೊಡಬೇಕೆಂದೂ ಮೇಲಿಂದ ಸಲಹಾ ರೂಪದ ನಿರೂಪ ಬಂದಿತು. 'ನಾನು ಮಾತ್ರ ಅರ್ಧ ಅಂಕವನ್ನೂ ಕೊಡಲಾರೆ, ಬೇಕಾದ್ದು ಮಾಡಿಕೊಳ್ಳಿ' ಎಂದು ಹೇಳಿ ಉತ್ತರ ಪತ್ರಿಕೆಯನ್ನು ಮೇಲಧಿಕಾರಿಗೆ ಕಳಿಸಿಕೊಟ್ಟರು" ಇದು ಕುವೆಂಪು ಅವರ ವೃತ್ತಿ ಬದ್ಧತೆಯನ್ನು ತೊರಿಸುತ್ತದೆ.

ಶಿಕ್ಷಣ ವ್ಯವಸ್ಥೆಯಲ್ಲಿ ಇಂತಹ ನಿಲುವುಗಳನ್ನು ಪಠ್ಯಕ್ರಮದಲ್ಲಿ ಅಳವಡಿಕೊಂಡರೆ ಬೋಧಿಸುವ ಶಿಕ್ಷಕರು ಮತ್ತು ವಿದ್ಯಾರ್ಥಿಗಳಲ್ಲಿ ಪ್ರಾಮಾಣಿಕತೆ ಗುಣವನ್ನು ಬೆಳೆಸಿದಂತಾಗುತ್ತದೆ. ಯಾವುದೇ ಕೆಲಸ ಮಾಡಿದರು ಅದರಲ್ಲಿ ತೃಪ್ತಿ, ದಕ್ಷತೆ ಮತ್ತು ಪರಿಪೂರ್ಣತೆಯನ್ನು ಹೊಂದಿರಬೇಕಾದರೆ ಆ ಕೆಲಸ ಮತ್ತು ವ್ಯಕ್ತಿಯಲ್ಲಿ ಬದ್ಧತೆ ಇರಬೇಕಾಗುತ್ತದೆ ಎಂದು ಕುವೆಂಪು ಅಭಿಪ್ರಾಯಪಟ್ಟಿದ್ದಾರೆ.

ನುಡಿದಂತೆ ನಡೆಯಬೇಕಾದ ಅಧ್ಯಾಪಕರು: ತಾವು ಒಬ್ಬ ಪ್ರಾಧ್ಯಾಪಕರಾಗಿ ಮೈಸೂರು ವಿಶ್ವವಿದ್ಯಾಲಯದ ಕುಲಪತಿಗಳಾಗಿ ಸೇವೆ ಸಲ್ಲಿಸಿ ವಿದ್ಯಾರ್ಥಿಗಳಿಗೆ ಬದುಕಿನ ಪಾಠವನ್ನು ಕಲಿಸಿಕೊಟ್ಟಂತವರು. ಅವರ ನಿಲುವಿನಲ್ಲಿ ಯಾವ ಸಂಸ್ಥೆಗಳು ಮತ್ತು ಅಧ್ಯಾಪಕರು ವಿದ್ಯಾರ್ಥಿಗಳ ಮನೋಭಾವವನ್ನು ಮೂಢನಂಬಿಕೆಗಳಿಂದ ಮತ್ತು ಮೌಢ್ಯಗಳಿಂದ ದೂರವಿಡಬೇಕೋ ಅಂತಹ ಅಧ್ಯಾಪಕರೇ ವೈಜ್ಞಾನಿಕದೃಷ್ಟಿ ಮತ್ತು ವಿಶಾಲ ಮನೋಭಾವದಿಂದ ದೂರ ಸರಿದುಒಬ್ಬ ವಿಜ್ಞಾನ ಕಲಿಸಿ ಕೊಡುವ ಅಧ್ಯಾಪಕನೇ ತನ್ನ ಸ್ವಂತ ಬದುಕಿನಲ್ಲಿ ರಾಹುಕಾಲ, ಪಂಚಾಂಗ ವಾರ ಭವಿಷ್ಯ ಇತ್ಯಾದಿ ಮೂಢನಂಬಿಕೆಗಳಿಗೆ ಮಾರು ಹೊತ್ತು ಮತ ಮೂರ್ಖನಾಗಿದ್ದರೆ ವಿದ್ಯಾರ್ಥಿಗಳಿಗೆ ಹೇಗೆ ತಾನೆ ಸಿದ್ಧಿಸೀತು ವಿಚಾರದೃಷ್ಟಿ ಎಂದು ಬೇಸರ ಹೇಳಿಕೊಳ್ಳುತ್ತಾರೆ. ಶಿಕ್ಷಕರು ವಿದ್ಯಾರ್ಥಿಗಳನ್ನು ತಿದ್ದುವ ಕೆಲಸವನ್ನು ಮಾಡಬೇಕೇ ಹೊರತು ತಾವೇ ತಮ್ಮ ನಡುವಳಿಕೆಗಳಿಂದ ವಿದ್ಯಾರ್ಥಿಗಳನ್ನು ತಪ್ಪು ದಾರಿಗೆ ಎಳೆಯಬಾರದು ಏಕೆಂದರೆ ಶಿಕ್ಷಕರ ವ್ಯಕ್ತಿತ್ವವು ವಿದ್ಯಾರ್ಥಿಗಳಮೇಲೆನೇರವಾಗಿಪರಿಣಾಮಬೀರುತ್ತದೆ. ಎಷ್ಟೋ ವಿದ್ಯಾರ್ಥಿಗಳು ತಮ್ಮ ಶಿಕ್ಷಕರಂತೆಯೇ ವರ್ತನೆ ಮಾಡುವುದು ಅವರನ್ನೇ ಅನುಕರಿಸುವ ಮನಸ್ಥಿತಿಯನ್ನು ಉಳ್ಳವರಾಗಿದ್ದು ವಿದ್ಯಾರ್ಥಿಗಳ ಜೀವನಕ್ಕೆ ತಮ್ಮ ಶಿಕ್ಷಕರನ್ನೇ ಆದರ್ಶ ವ್ಯಕ್ತಿಗಳನ್ನಾಗಿ ಮಾಡಿಕೊಂಡು ಅವರನ್ನೇ ಪರಿಪಾಲಿಸಬೇಕು ಎಂಬ ನಿಲುವಿಗೂ ಬಂದಿರುತ್ತಾರೆ.

ಇಂದಿನ ವಿದ್ಯಾರ್ಥಿಗಳೇ ಮುಂದಿನ ಪ್ರಜೆಗಳು ಎಂಬಂತೆ ಪ್ರಜಸತ್ತಾತ್ಮಕ ಧೋರಣೆಯನ್ನು ಅಧ್ಯಾಪಕರು ತಮ್ಮ ಬೋಧನೆಯಲ್ಲಿ ಬೋಧಿಸಿ ಪ್ರಚೋದಿಸಿ, ವಿದ್ಯಾರ್ಥಿಗಳ ತಪ್ಪು ಗ್ರಹಿಕೆಗಳಿಗೆ ಸಮಂಜಸವಾದ ಉತ್ತರಗಳನ್ನು ನೀಡಿ ಸರಿದಾರಿಗೆ ಕರೆದ್ಯೊಯ ಬೇಕಾಗುತ್ತದೆ. ನಮ್ಮದೇಶದಲ್ಲಿ ಹಲವು ಕಟ್ಟು ಪಾಡುಗಳಿವೆ ಅದರಿಂದ ಮುಕ್ತವಾಗುವುದು ಸುಲಭವಲ್ಲಆದರೂ ಶಾಲೆಯಲ್ಲೇ ಹೆಚ್ಚಿನ ಸಮಯವನ್ನು ಕಳೆಯುವ ವಿದ್ಯಾರ್ಥಿಗಳಿಗೆ ಶಾಲೆಯು ವಿಶಾಲ ವಿಚಾರಧಾರೆ ಮತ್ತು ವಿವೇಚನೆಯನ್ನು



ನೀಡಬಹುದಾಗಿದೆ. ಶಿಕ್ಷಣದಿಂದಲೇ ಮಾತ್ರ ವಿದ್ಯಾರ್ಥಿಗಳಲ್ಲಿ ಒಳ್ಳೆಯ ಆಲೋಚನೆ, ಅಭಿಪ್ರಾಯ, ಸ್ವಾವಲಂಬನೆಯ ಬದುಕು, ಆಸಕ್ತಿ, ಮೌಲ್ಯಗಳನ್ನು ಬೆಳೆಸಲು ಸಾಧ್ಯವಾಗುತ್ತದೆ, ಹಾಗಾಗಿ ಮೊದಲು ಬೋಧಿಸುವ ಅಧ್ಯಾಪಕರುಗಳು ತಮ್ಮ ನಿಲುವನ್ನು ಬದಲಿಸಿಕೊಂಡು ನಂತರದಲ್ಲಿ ಅಂತಹ ವಿಚಾರ ಧಾರೆಗಳನ್ನು ವಿದ್ಯಾರ್ಥಿಗಳಿಗಳಿಗೆ ಬೋಧಿಸಿ ಅಳವಡಿಸಿಕೊಳ್ಳುವಂತೆ ಮಾಡಲು ಸಾಧ್ಯವಾಗಬೇಕಿದೆ. ಇದಕ್ಕೆ ಉದಾಹರಣೆಯೆಂಬಂತೆ 'ಬೆರಳ್‌ಗೆ ಕೊರಳ್' ಎಂಬ ಕುವೆಂಪು ಅವರ ನಾಟಕದಲ್ಲಿ ದ್ರೋಣಾಚಾರ್ಯರು ಮತ್ತು ಏಕಲವ್ಯನ ಗುರು ಶಿಷ್ಯನ ಸಂಬಂಧವನ್ನು ವರ್ಣಿಸಿದ್ದಾರೆ.

ಬೋಧನೆಯು ಒಂದು ಕಲೆಯಾಗಿದೆ: ಸಾಹಿತ್ಯರಚನೆ ಹೇಗೆ ಅವರದೇಎಂಬಂತೆ ವಿಶಿಷ್ಟವೋ ಬೋಧನ ಕ್ರಮವೂ ಅವರದೇ ವಿಶಿಷ್ಟ. ಅಕ್ಷರಅಕ್ಷರ ಓದಿ ಹೇಳುವ ಪಾಠವಲ್ಲ ಅವರದು. ಅಲ್ಲೊಂದು ಇಲ್ಲೊಂದು ಅಗುಳನ್ನು ಹಿಚಿಕಿ ತೋರಿಸಿ, ಇದು ಮುಗುಳಕ್ಕಿ, ಇದು ಅರೆಬೆಂದುದು, ಚೆನ್ನಾಗಿ ಬೆಂದ ಅನ್ನ ಇರಬೇಕಾದುದು ಹೀಗೆ ಎಂದು ತೋರಿಸುವ ರೀತಿ. ಆದರೆ ಅವಶ್ಯಕವೆನಿಸಿದಲ್ಲಿ ಎಳೆಎಳೆಯಾಗಿ ಬಿಡಿಸಿ, ಬೂದುಗನ್ನಡಿ ಹಿಡಿದು, ದೃಷ್ಟಾಂತಗಳೊಡನೆ ಪರಿಷ್ಕಾರವಾಗಿ ತೋರಿಸಿ ಕೊಡುತ್ತಿದ್ದರು.

ಕುವೆಂಪು ಹೆಚ್ಚು ದೀರ್ಘವಾಗಿ ಮತ್ತು ವಿವರವಾಗಿ ಮಾಡಿದ ಪಾಠವೆಂದರೆ 'ಅಲಂಕಾರಶಾಸ್ತ್ರ' ಅದನ್ನು 'ಅಲಂಕಾಶಾಸ್ತ್ರ'ವೆನ್ನುವುದುಕ್ಕಿಂತ 'ಕಾವ್ಯಮೀಮಾಂಸೆ' ಅಥವಾ 'ಕಾವ್ಯವಿಮರ್ಶೆಯ ಮೂಲತತ್ತ್ವಗಳು' ಎಂದುಕರೆಯಬಹುದು. ಸ್ವಯಂ ಕವಿಯಾಗಿ ಪಾಶ್ಚಾತ್ಯ ಪೌರ್ವಾತ್ಯರ ಕಾವ್ಯ ಮೀಮಾಂಸಾ ತತ್ತ್ವಗಳನ್ನೆಲ್ಲ ಕೂಲಂಕುಷವಾಗಿ ಶೋಧಿಸಿ ಸ್ವಂತ ಅಭಿಪ್ರಾಯಗಳನ್ನು ರೂಪಿಸಿಕೊಂಡಿದ್ದುರಿಂದ ಪಾಠ ಮಾಡುವಾಗ ಸಾಹಿತ್ಯದ ವಿಯತ್ತಳದಲ್ಲಿ ಗರುಡನಂತೆ ಗರಿಗೆದರಿಸವೇಚ್ಛೆಯಾಗಿ ವಿಹರಿಸುತ್ತಿದ್ದರು. ತತ್ತ್ವಗಳನ್ನು ಎಳೆಎಳೆಯಾಗಿ ಪದರ ಪದರವಾಗಿ ಬಿಡಿಸಿ ಅರ್ಥಯಿಸುತ್ತಿದ್ದರು. ಅವರದು ಪರಪ್ರೇರಿತ ಆಲೋಚನೆಯಾಗಿರಲಿಲ್ಲ. ಸ್ವತಂತ್ರ ವಿಚಾರಧಾರೆಯಾಗಿದ್ದದರಿಂದ ಅವರ ಪಾಠಹೊಸ ಪ್ರಪಂಚವೊಂದಕ್ಕೆ ಕಣ್ಣುತೆರೆಸಿದಂತೆ ಇತ್ತು.

ಕುವೆಂಪು ಪಾಠವನ್ನು ಕೇಳುತ್ತಿದ್ದರೆ ವೇಳೆ ಕಳೆದದ್ದೇ ಅರಿವಾಗುತ್ತಿರಲಿಲ್ಲ. ವಿಷಯದ ಆಳಕದಕೆ ಅವರು ಇಳಿದಂತೆಲ್ಲ ವಿದ್ಯಾರ್ಥಿಗಳನ್ನೂ ಜೊತೆಯಲ್ಲೇ ಕರೆದೊಯ್ದು ವಿಷಯವನ್ನು ಪದರ ಪದರವಾಗಿ ಬಿಡಿಸಿ, ಅನುಭವಗಮ್ಯವಾದ ನಿತ್ಯಜೀವನದ ನಿದರ್ಶನಗಳಿಂದಲೂ ಸಾಮತಿಗಳಿಂದಲೂ ಕತೆಗಳಿಂದಲೂ ವಿಷಯವನ್ನು ಹೃದಯಂಗಮವಾಗಿಸುತ್ತಿದ್ದರು. ಕೆಲವೊಮ್ಮೆ ಕಪ್ಪು ಹಲಗೆಯ ಮೇಲೆ ಚಿತ್ರಗಳನ್ನು ಬರೆದು ವಿಷಯವನ್ನು ಸ್ಪಷ್ಟಪಡಿಸಿದ್ದೂ ಉಂಟು. ಕುವೆಂಪು ಅವರು ಏನನ್ನೇ ಪಾಠಮಾಡುತ್ತಿರಲಿ, ಯಾವಾಗ ಪಾಠ ಮಾಡುತ್ತಿರಲಿ, ಎಲ್ಲೇ ಪಾಠಮಾಡುತ್ತಿರಲಿ ಪ್ರಾಸಂಗಿಕವಾಗಿ ಅವಿರತವಾಗಿ ನುಡಿಮುತ್ತುಗಳು ಹೊರಬೀಳುತ್ತಿದ್ದುವು.

ಅಂತರ್ ಶಿಸ್ತಿಯ ಬೋಧನಾಕ್ರಮ: ಕುವೆಂಪು ಕನ್ನಡ ಸಾಹಿತ್ಯದ ಮೇರು ರಾಷ್ಟ್ರಕವಿ, ಇವರು ಸಾಹಿತ್ಯದ ಹಲವು ರೂಪಗಳಲ್ಲಿ ತಮ್ಮ ಅನುಭವಗಳನ್ನು, ಚಿಂತನೆಗಳನ್ನು, ಸಂದೇಶಗಳನ್ನು ಅಭಿವ್ಯಕ್ತಪಡಿಸಿದ್ದಾರೆ. ಅದರಂತೆಯೇ ಕುವೆಂಪು ಅವರಿಗೆ ವಿಜ್ಞಾನ ವಿಷಯದಲ್ಲಿ ಹೆಚ್ಚಿನ ಆಸಕ್ತಿ ಇತ್ತು ಅಂದರೇ ಒಬ್ಬ ಅಧ್ಯಾಪಕ ಯಾವುದೇ ಕಾರಣಕ್ಕೂ ತನ್ನ ವಿಷಯದಲ್ಲಿ ಮಾತ್ರ ಪರಿಣತಿಯನ್ನು ಹೊಂದದೆ, ಅವರವರ ಆಸಕ್ತಿಗನುಗುಣವಾಗಿ ಬೇರೆ ವಿಷಯಗಳಲ್ಲೂ ಸಹ ಪರಿಣತಿಯನ್ನು ಹೊಂದಬೇಕು ಎಂಬ ನಿಲುವು ಹೊಂದಿದ್ದರು. ನಮ್ಮ ವಿಚಾರಧಾರೆ ಹಾಗೂ ಆಲೋಚನೆಗಳನ್ನು ಒಂದು ನಿರ್ದಿಷ್ಟತೆಗೆ ಸೀಮಿತಗೊಳಿಸದೆ ವಿಶಾಲವಾದ ರೀತಿಯಲ್ಲಿ ಯೋಚಿಸಿದರೆ ತರಗತಿಗಳಲ್ಲಿ ವಿದ್ಯಾರ್ಥಿಗಳ ಗಮನ ಸೆಳೆಯಲು ಸಾಧ್ಯವಾಗುತ್ತದೆ ಹಾಗೂ ಅಧ್ಯಾಪಕರ ಜ್ಞಾನದ ಮಟ್ಟವೂ ಉತ್ತಮ ರೀತಿಯಲ್ಲಿ ಬೆಳವಣಿಗೆಯಾಗುತ್ತದೆ ಎಂದು ಅರ್ಥಮಾಡಿಕೊಳ್ಳಬಹುದು. ಅಧ್ಯಾಪಕರುಗಳು ಹೆಚ್ಚಿನ ವಿಷಯಗಳಲ್ಲಿ ಪರಿಣತಿಯನ್ನು ಹೊಂದಿದ್ದರೆ ಯಾವುದೇ ಸಂದರ್ಭದಲ್ಲೂ ಪಾಂಡಿತ್ಯವನ್ನು ಪ್ರದರ್ಶಿಸಬಹುದು ಅಲ್ಲದೆ ವಿದ್ಯಾರ್ಥಿಗಳಿಗೂ ಸಹ ಅಧ್ಯಾಪಕರನ್ನು ಒಬ್ಬ ಮಾದರಿ ಅಧ್ಯಾಪಕರನ್ನಾಗಿ ಅನುಸರಿಸಬಹುದು.

ಬೇರೆಯವರ ವಿಚಾರಗಳಿಗೆ ಗೌರವ: ಕುವೆಂಪು ವಿಶಾಲ ಮನೋಭಾವವಿರುವ ಕಾರಣ ತಮ್ಮ ಕೃತಿ ಮತ್ತು ಚಿಂತನೆಗಳಿಗೆ ಮಾತ್ರ ಸೀಮಿತವಾಗಿರದೆ ಬೇರೆಯವರ ಉತ್ತಮ ಸಂದೇಶವುಳ್ಳ ಸಮಾಜ ಕಳಕಳಿಯಿರುವ ಕೃತಿಗಳನ್ನು ಓದಿ ಪ್ರಶಂಸಿಸಿ ಆ ವಿಚಾರಗಳನ್ನು ಬೇರೆಯವರೊಂದಿಗೆ ಚರ್ಚಿಸುತ್ತಿದ್ದರು. ಅದಕ್ಕೆ ಉದಾಹರಣೆಯಾಗಿ ಪೂರ್ಣಚಂದ್ರ ತೇಜಸ್ವಿಯವರು ಹೇಳುವಂತೆ ತನ್ನ ಅಣ್ಣ (ಕುವೆಂಪು) ಬೇಂದ್ರೆಯವರ 'ಸಾಯೋ ಆಟ' ನಾಟಕವನ್ನು ಅಷ್ಟೂ ಜನ ಮಕ್ಕಳನ್ನೂ ಕೂರಿಸಿಕೊಂಡು ಅಭಿನಯ ಪೂರ್ವಕವಾಗಿ ವಾಚನ ಮಾಡಿದ್ದು ಜ್ಞಾಪಕಕ್ಕೆ ಬರತ್ತದೆಂದು. ಮನುಷ್ಯ ಒಂದು ಉನ್ನತ ಸ್ಥಾನಕ್ಕೇರಿದ ನಂತರದಲ್ಲಿ ಅಹಂಕಾರದಿಂದ ಕಣ್ಣಿಗೆ ಪರದೆ ಬಂದುಯಾರೂ ಕಾಣದೆ ಬೀಗುವುದು ಹಾಗೂ ತನ್ನದೇ ವಿಚಾರ ಧಾರೆಗಳನ್ನು ಒತ್ತಾಯ ಪೂರ್ವಕವಾಗಿ ಬೇರೆಯವರ ಮೇಲೆ ಹೇರುವುದು ಸಹಜವಾಗಿ ಕಂಡುಬರುತ್ತದೆ ಇಂತಹ ಸಂದರ್ಭದಲ್ಲಿ ಕುವೆಂಪು ಅವರ ಸಹಿಷ್ಣತೆಯ ಮನೋಭಾವ, ಸಹಕಾರಗಳ ಚಿಂತನೆಗಳು ಬೇರೆಯವರಿಗೂ ದಾರಿದೀಪವಾಗುತ್ತದೆ.

ಕವಿ–ಶಿಕ್ಷಕ ಕುವೆಂಪು ಅವರು ಸ್ಪೂರ್ತಿಯ ಬೆಳಕಾಗಿ ಮನಸುಗಳನ್ನು ಬೆಳಗಿದ ಮತ್ತು ಆತ್ಮಗಳನ್ನು ಬೆಳೆಸಿದರು ಅವರ ತರಗತಿಗಳು ಭಾಷೆ, ಸಾಹಿತ್ಯ ಮತ್ತು ಜೀವನ ಪಾಠಗಳ ವಸ್ತುಗಳಿಂದ ತುಂಬಿದ್ದವು. ಕನ್ನಡ ಭಾಷೆಯ ಮೇಲಿನ ಅವರ ಉತ್ಸಾಹವು ಮಾತೃಭಾಷೆಯ ಶಿಕ್ಷಣಕ್ಕಾಗಿ ಅವರ ಸಮರ್ಥನೆಗೆ ಉತ್ತೇಜನ ನೀಡಿತು, ಶಿಕ್ಷಣದಲ್ಲಿ ಅದರ ಸರಿಯಾದ ಸ್ಥಾನಕ್ಕೆ ದಾರಿ ಮಾಡಿಕೊಟ್ಟಿತು. ಭಾಷಾ ಗಡಿಗಳನ್ನು ಮೀರಿ, ಅವರು ಸಾಮಾಜಿಕ ನ್ಯಾಯ, ಪರಿಸರ ಪ್ರಜ್ಞೆ ಮತ್ತು ಸಾರ್ವತ್ರಿಕ ಭ್ರಾತೃತ್ವದ ಮೌಲ್ಯಗಳನ್ನು ಹುಟ್ಟುಹಾಕಿದರು, ತಮ್ಮ ವಿದ್ಯಾರ್ಥಿಗಳನ್ನು ಕೇವಲ ವಿದ್ವಾಂಸರನ್ನಾಗಿ ಮಾಡದೆ, ಮಾನವತಾವಾದದ ಚೈತನ್ಯದಿಂದ ತುಂಬಿದ ಸುಸಂಬದ್ಧ ನಾಗರಿಕರಾಗಿ ರೂಪಿಸಿದರು. ಶಿಕ್ಷಕನ ಪ್ರಭಾವವು ತರಗತಿಯ ಗೋಡೆಗಳನ್ನು ಮೀರುತ್ತದೆ ಮತ್ತು ತಲೆಮಾರುಗಳ ಮೂಲಕ ಪ್ರತಿಧ್ವನಿಸುತ್ತದೆ ಎಂದು ಅವರು ಅಳಿಸಲಾಗದ ಗುರುತು ಉಳಿಸಿರುತ್ತಾರೆ.

» **ಲೇಖಕರು:**

» **ಡಾ. ಜಗನ್ನಾಥ ಕೆ. ಡಾಂಗೆ, ಶಿಕ್ಷಣ ಪ್ರಾಧ್ಯಾಪಕರು, ಕುವೆಂಪು ವಿಶ್ವವಿದ್ಯಾಲಯ.**

» **ಡಾ. ಉಷಾ. ಜಿ. ಆರ್. ಪ್ರಾಂಶುಪಾಲರು, ಓಂಕಾರ್‌ಮಲ್ ಶಿಕ್ಷಣ ಮಹಾವಿದ್ಯಾನಿಲಯ, ಮೈಸೂರು.**

» **ಡಾ. ಭವ್ಯ. ಆರ್. ಪೋಸ್ಟ್‌ಡಾಕ್ಟರಲ್, ಸಂಶೋಧನಾರ್ಥಿ, ಕುವೆಂಪು ವಿಶ್ವವಿದ್ಯಾಲಯ.**

## ಖಾಸಗಿ ಅಂಗಕ್ಕೆ ಬೆಂಕಿ ಹಚ್ಚಿ ಹಟ್ಟು ಹಬ್ಬ ಆಚರಿಸಿದ ಸ್ನೇಹಿತರು

ಫ್ರೆಂಡ್ಸ್ ಅಂದ್ರೇನೇ ಹಾಗೆ ಎಲ್ರೂ ಜೊತೆ ಸೇರಿದಾಗ ಒಬ್ಬರನ್ನೊಬ್ಬರು ಕಿಚಾಯಿಸಿ ಮಾತನಾಡುತ್ತಾ, ಕಾಮಿಡಿ ಮಾಡ್ತಾ ತರ್ಲೆ ತಮಾಷೆ ಮಾಡ್ತಿರ್ತಾರೆ. ಅದರಲ್ಲೂ ಕೆಲ ಗೆಳೆಯರಂತೂ ಜೊತೆ ಸೇರಿದ್ರೆ ಸಿಕ್ಕಾಪಟ್ಟೆ ಕಿತಾಪತಿಗಳನ್ನು ಮಾಡಿ ಮಜಾ ತೆಗೆದುಕೊಳ್ಳುತ್ತಿರುತ್ತಾರೆ. ಆದ್ರೆ ಕೆಲವೊಂದು ಬಾರಿ ಈ ತರ್ಲೆ ತಮಾಷೆಗಳು ಅತಿರೇಕವೆನಿಸುತ್ತದೆ. ಅದೇ ರೀತಿ ಇಲ್ಲೊಂದಷ್ಟು ಯುವಕರು ತಮ್ಮ ಗೆಳೆಯನ ಹುಟ್ಟುಹಬ್ಬದ ದಿನವೂ ಇಂಥಹದ್ದೊಂದು ಕಿತಾಪತಿಯನ್ನು ಮಾಡಿದ್ದಾರೆ. ಹೌದು ಹಾಯಾಗಿ ಮಲಗಿದ್ದ ಬರ್ತ್ ಡೇ ಬಾಯ್ ರೂಮಿಗೆ ಬಂದಂತಹ ಒಂದಷ್ಟು ಯುವಕರು ತಮ್ಮ ಗೆಳೆಯನ ಖಾಸಗಿ ಭಾಗಕ್ಕೆ ಬೆಂಕಿ ಹಚ್ಚಿ ಹುಟ್ಟುಹಬ್ಬಕ್ಕೆ ವಿಶ್ ಮಾಡಿದ್ದಾರೆ. ಈ ವಿಡಿಯೋ ಇದೀಗ ಸಿಕ್ಕಾಪಟ್ಟೆ ವೈರಲ್ ಆಗುತ್ತಿದೆ.

## ಲಕ್ನೋ ತಂಡಕ್ಕೆ ನಾಯಕ ಕೆಎಲ್ ರಾಹುಲ್ ಗುಡ್ ಬೈ?

ಲಕ್ನೋ ಸೂಪರ್ ಜೈಂಟ್ಸ್ ತಂಡದ ನಾಯಕನಾಗಿರುವ ಕೆಎಲ್ ರಾಹುಲ್ ತಮ್ಮ ತಂಡವನ್ನು 2022 ಹಾಗೂ 2023ರ ಐಪಿಎಲ್ ಸೀಸನ್‌ಗಳಲ್ಲಿ ಪ್ಲೇ ಆಫ್‌ವರೆಗೆ ಕರೆತಂದಿದ್ದರು. ಅಲ್ಲದೇ, ಸ್ವತಃ ಬ್ಯಾಟಿಂಗ್‌ನಲ್ಲಿ ಅತಿ ಹೆಚ್ಚು ಸ್ಕೋರರ್ ಅನಿಸಿದ್ದರು. ಕಳೆದ ಐಪಿಎಲ್‌ನಲ್ಲಿ ಅಷ್ಟೇನು ಪ್ರದರ್ಶನ ನೀಡದ ರಾಹುಲ್ ಗಾಯದಿಂದ ಹೊರಗುಳಿಯಬೇಕಾಯ್ತು. ಈ ಮಧ್ಯೆ ಪಂದ್ಯವೊಂದರ ಅಂತಿಮ ಹಂತದಲ್ಲಿ ಲಕ್ನೋ ಫ್ರಾಂಚೈಸಿಯ ಮಾಲೀಕ ಸಂಜೀವ್ ಗೋಯೆಂಕ ಸ್ಟೇಡಿಯಂನಲ್ಲಿಯೇ ರಾಹುಲ್‌ನನ್ನು ತರಾಟೆಗೆತ್ತಿಕೊಂಡಿದ್ದು ಎಲ್ಲೆಡೇ ಭಾರಿ ಸುದ್ದಿಯಾಗಿತ್ತು. ಇದರಿಂದಾಗಿ ಕೆಎಲ್ ರಾಹುಲ್, ಲಕ್ನೋ ತಂಡವನ್ನು ತೊರೆಯುತ್ತಾರೆ ಎಂದೆಲ್ಲ ವದಂತಿಗಳು ಹಬ್ಬಲು ಶುರುವಾದವು.

## ಹೃದಯದ ಆರೋಗ್ಯಕ್ಕೆ ಅತ್ಯುತ್ತಮ ಸಸ್ಯಾಹಾರಿ ಆಹಾರಗಳು

ಹಲವಾರು ಹೃದಯ ಸಮಸ್ಯೆಗಳ ಅಪಾಯಗಳನ್ನು ಕಡಿಮೆ ಮಾಡುವಾಗ ನಿಮ್ಮ ಹೃದಯದ ಕಾರ್ಯನಿರ್ವಹಣೆಯನ್ನು ಸುಧಾರಿಸುವ ವಿವಿಧ ಸಸ್ಯಾಹಾರಿ ಆಯ್ಕೆಗಳಿವೆ. ಉತ್ಕರ್ಷಣ ನಿರೋಧಕಗಳು, ವಿಟಮಿನ್‌ಗಳು ಮತ್ತು ಖನಿಜಗಳನ್ನು ಹೇರಳವಾಗಿ ಒಳಗೊಂಡಿರುವೆ ಕಾರಣ ತಮ್ಮ ದೈನಂದಿನ ಆಹಾರದಲ್ಲಿ ಪಾಲಕ್ ಮತ್ತು ಮೆಂತ್ಯನಂತಹ ಎಲೆಗಳ ತರಕಾರಿಗಳನ್ನು ಸೇರಿಸಿಕೊಳ್ಳಬೇಕು.

## ತೆಂಗಿನಕಾಯಿ ಬೆಲೆ ಏರಿಕೆ

ತೆಂಗಿನ ಕಾಯಿ ಬೆಲೆ ಇದೀಗ ಡಬಲ್ ಆಗಿದೆ. ಕೆಲವು ತಿಂಗಳ ಹಿಂದೆ 25



ರೂಪಾಯಿಗೆ ಮಾರಾಟವಾಗುತ್ತಿದ್ದ ತೆಂಗಿನಕಾಯಿ ಇದೀಗ 50 ರೂಪಾಯಿಗೆ ಏರಿಕೆಯಾಗಿದೆ ಆದರೆ ರೈತನಿಗೆ ಮಾತ್ರ ಇದರಿಂದ ಯಾವುದೇ ಪ್ರಯೋಜನವಿಲ್ಲದಂತಾಗಿದೆ. ಸೆಪ್ಟಂಬರ್ ತಿಂಗಳ ಆರಂಭದಿಂದಲೇ ತೆಂಗಿನ ಕಾಯಿಗೆ ಬೇಡಿಕೆ ವ್ಯಕ್ತವಾಗಿದೆ. ಅದರ ಜೊತೆಗೆ ಕೊಬ್ಬರಿ, ಕೊಬ್ಬರಿ ಎಣ್ಣೆಗೂ ಬೇಡಿಕೆ ಬಂದಿದೆ. ಹೀಗಾಗಿ ಕೊಬ್ಬರಿ, ತೆಂಗಿನ ಕಾಯಿ ಬೆಲೆಯಲ್ಲೂ ದಿಢೀರ್ ಏರಿಕೆ ಕಂಡುಬಂದಿದ್ದು, ರೈತರು ಮತ್ತು ವ್ಯಾಪಾರಿಗಳ ಮುಖದಲ್ಲಿ ಮಂದಹಾಸ ಮೂಡಿದೆ. ಇಷ್ಟೂ ಸಮಯಗಳ ಕಾಲ ಕಡಿಮೆ ಬೆಲೆಗೇ ಮಾರಾಟ ಮಾಡುತ್ತಿದ್ದ ಕೃಷಿಕರಿಗೆ ಈಗ ಧಾರಣೆ ಏರಿಕೆ ಖುಷಿ ನೀಡಿದೆ. ಆದರೆ ಬೆಳೆ ಇಲ್ಲದೆ ಧಾರಣೆ ಮಾತ್ರಾ ನೋಡುವಂತಾಗಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T